ವಿಜಯಪುರ | ಸಂಪುಟ 02 | ಸಂಚಿಕೆ 228 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ರವಿವಾರ,03,ನವೆಂಬರ್,2024

"ರಾಜ್ಯದಲ್ಲಿ ನಡೆಯಲಿರುವ ಉಪಚುನಾವಣೆ ಮತ್ತು ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಗಳಲ್ಲಿ ರಾಜಕೀಯ ಮಾಡಲು ಬಿಜೆಪಿ ವಕ್ಫ್ ವಿಷಯವನ್ನು ಎತ್ತುತ್ತಿದೆ. ಸರ್ಕಾರ ರೈತರಿಂದ ಒಂದು ಇಂಚು ಭೂಮಿಯನ್ನು ಸಹ ಕಸಿದುಕೊಳ್ಳುತ್ತಿಲ್ಲ ಮತ್ತು ಭೂ ದಾಖಲೆಗಳನ್ನು ಸರಳೀಕರಿಸಲು ಯೋಜಿಸುತ್ತಿದೆ."



- ಎಂ.ಬಿ.ಪಾಟೀಲ

ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು

### ನೋಟಿಸ್‌ಗಳನ್ನು ತಕ್ಷಣದಿಂದಲೇ ವಾಪಸ್ ಪಡೆಯಿರಿ । ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಖಡಕ್ ಸೂಚನೆ!

## ವಕ್ಫ್ ವಿವಾದ: ಪಹಣಿ ತಿದ್ದುಪಡಿ ರದ್ದು ಮಾಡಿ



ಬೆಂಗಳೂರು: ವಕ್ಫ್ ಆಸ್ತಿ ವಿಚಾರ ರಾಜ್ಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಈ ಮಧ್ಯೆ ರೈತರಿಗೆ ನೀಡಲಾಗಿರುವ ನೋಟಿಸ್‌ಗಳನ್ನುತಕ್ಷಣದಿಂದಲೇ ವಾಪಸ್ ಪಡೆಯುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದ್ದಾರೆ.

ಕಂದಾಯ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಮತ್ತು ವಕ್ಫ್ ಮಂಡಳಿಯ ಹಿರಿಯ ಅಧಿಕಾರಿಗಳ ಜೊತೆ ಶನಿವಾರ ಸಿಎಂ ಸಿದ್ದರಾಮಯ್ಯ ಸುದೀರ್ಘ ಸಭೆ ನಡೆಸಿದರು.

ಈ ವೇಳೆ ವಕ್ಫ್ ಜಮೀನು ವಿಚಾರದಲ್ಲಿ ಇತ್ತೀಚೆಗೆ ನಡೆದಿರುವ ಬೆಳವಣಿಗೆಗಳ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು ನೋಟಿಸ್ ವಿಚಾರದಲ್ಲಿ ಕೆಲ ಅಧಿಕಾರಿಗಳು ಕೈಗೊಂಡಿರುವ ಕ್ರಮದ ಬಗ್ಗೆಯೂ ಆಕ್ರೋಶ ವ್ಯಕ್ತಪಡಿಸಿದ್ದು ಈ ರೀತಿಯ ತೊಂದರೆ ನೀಡದಂತೆ ಅಧಿಕಾರಿಗಳಿಗೆ ಸಿಎಂ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಕ್ಫ್ ವಿಚಾರವನ್ನು ಜೆಡಿಎಸ್ ಮತ್ತು ಬಿಜೆಪಿ ರಾಜಕಾರಣಕ್ಕೆ ಬಳಸಿಕೊಳ್ಳುತ್ತಿದ್ದು ರಾಜ್ಯದಲ್ಲಿ ಶಾಂತಿ ಕದಡುವ ಪ್ರಯತ್ನ ಮಾಡುತ್ತಿವೆ. ಇಂತಹ ಹೀನ ಪ್ರಯತ್ನಗಳಿಗೆ ರಾಜ್ಯದ ಜನರು ಸೊಪ್ಪು ಹಾಕದಂತೆ ಸಿದ್ದರಾಮಯ್ಯ ವಿನಂತಿ ಮಾಡಿದ್ದು ಅವರ ಅಪ ಪ್ರಚಾರಗಳಿಗೆ ಕಿವಿಗೊಡದಂತೆ ಜನತೆಗೆ ಮನವಿ ಮಾಡಿದರು.

ರೈತರ ಪಹಣಿ ಬದಲಾವಣೆ ಸಂಬಂಧ ಈಗಾಗಲೇ ನೀಡಿರುವ ನೋಟಿಸ್‌ಗಳನ್ನು ತಕ್ಷಣ ವಾಪಸ್ ಪಡೆರಿಯಿ. ರೈತರ ಸ್ವಾಧೀನದಲ್ಲಿರುವ ಜಮೀನುಗಳಿಗೆ ಯಾವುದೇ ರೀತಿಯ ತೊಂದರೆ ನೀಡಬಾರದು ಎಂದು ಸೂಚಿಸಿದರು. ಕಾನೂನು ಬಾಹಿರವಾಗಿ ಹಾಗೂ ನೋಟಿಸ್ ನೀಡದೆ ಪಹಣಿಯಲ್ಲಿ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡಿದ್ದರೆ ತಕ್ಷಣ ರದ್ದು ಮಾಡಬೇಕು ಎಂದು ಖಡಕ್ ಸೂಚನೆ ನೀಡಿದರು.

### ಜಂಟಿ ಸಂಸದೀಯ ಸಮಿತಿಗೆ ತೇಜಸ್ವಿ ಸೂರ್ಯ ಪತ್ರ



ಬೆಂಗಳೂರು: ವಕ್ಫ್ (ತಿದ್ದುಪಡಿ) ಮಸೂದೆ 2024 ರ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರು ಕರ್ನಾಟಕದ ವಿಜಯಪುರ ಜಿಲ್ಲೆಯ ರೈತರನ್ನು ವಕ್ಫ್ ಮಂಡಳಿಯೊಂದಿಗೆ ಚರ್ಚಿಸಲು ಆಹ್ವಾನಿಸುವಂತೆ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಮನವಿ ಮಾಡಿದ್ದಾರೆ.

ವಿಜಯಪುರ ಮತ್ತು ಕರ್ನಾಟಕದ ಇತರ ಜಿಲ್ಲೆಗಳ ರೈತರ ಜಮೀನನ್ನು ವಕ್ಫ್ ಆಸ್ತಿಯನ್ನಾಗಿ ಘೋಷಿಸುವ ಕುರಿತು ಬಂದಿರುವ ನೋಟಿಸ್‌ಗಳ ಕುರಿತು, ಜಗದಾಂಬಿಕಾ ಅವರಿಗೆ ಪತ್ರ ಬರೆದಿದ್ದೇನೆ. ನೋಟಿಸ್‌ಗಳ ಹೊರತಾಗಿಯೂ ಹಲವರ ಆರ್ ಟಿ ಸಿ, ಪಹಣಿ ಗಳಲ್ಲಿಯೂ ಯಾವುದೇ ಸಮರ್ಪಕ ಕಾನೂನುಗಳನ್ನು ಪಾಲಿಸದೇ ವಕ್ಫ್ ಆಸ್ತಿಗಳೆಂದು ತಿದ್ದುಪಡಿ ಮಾಡಲಾಗಿದ್ದು, ಈ ರೀತಿ ತೊಂದರೆಗೆ ಒಳಗಾಗಿರುವ ರೈತರ ನಿಯೋಗವನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ಆಲಿಸುಬೇಕು. ಇದರಿಂದ ವಕ್ಫ್‌ನಿಂದ ಆಗಿರುವ ಭೂಮಿ ಅತಿಕ್ರಮಣದ ನೇರ ಮಾಹಿತಿ ದೊರಕಲಿದೆ' ಎಂದು ಮನವಿ ಮಾಡಿದ್ದಾರೆ.

### ಹುಲಜಂತಿಯ ಮಾಳಿಂಗರಾಯನ ಮೇಲೆ ಶಿವ-ಪಾರ್ವತಿಯರಿಂದ ಮುಂಡಾಸ್ । ಭಂಡಾರದಲ್ಲಿ ಮಿಂದೆದ್ದ ಭಕ್ತ ಸಮೂಹ ಹಳದಿಮಯ

## ಹುಲಜಂತಿಗೆ ಹರಿದು ಬಂದ ಭಕ್ತರ ಮಹಾಪೂರ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ ಮಾಳಿ



ಚಡಚಣ: ಹಾಲುಮತ ಸಮಾಜದ ಕಾಶಿ ಎಂದೇ ಪ್ರಸಿದ್ಧಿಯಾಗಿರುವ ಸಮೀಪದ ಹುಲಜಂತಿ ಗ್ರಾಮದ ಶ್ರೀ ಮಾಳಿಂಗರಾಯ ಜಾತ್ರೆಯ ಮುಂಡಾಸ್ ಹಾಗೂ ದೇವರುಗಳ ಪಲ್ಲಕ್ಕಿಗಳ ಭೇಟಿಯನ್ನು ನೋಡಲು ಭಕ್ತರ ಮಹಾಪೂರವೇ ಹರಿದು ಬಂದಿದೆ. ರಾಜ್ಯದ ಗಡಿಯಲ್ಲಿರುವ ಮಂಗಳವೇಡಾ ತಾಲೂಕಿನ ಹುಲಜಂತಿ ಗ್ರಾಮದಲ್ಲಿ ಮಾಳಿಂಗರಾಯನು 14ನೇ ಶತಮಾನದಲ್ಲಿ ಬಾಳಿ ಬದುಕಿ, ಹಲವು ಪವಾಡಗಳನ್ನು ಮಾಡಿದ ಪವಾಡ ಪುರುಷ ಮಾಳಿಂಗರಾಯ. ಮಾಳಿಂಗರಾಯನ ಭಕ್ತಿಗೆ ಮೆಚ್ಚಿದ ಪರಶಿವನು ದೀಪಾವಳಿಯ ಅಮವಾಸ್ಯೆಯ ದಿನ ಬೀಜಗುಂತಿಯ ಹುತ್ತದ ಮೇಲೆ ಹತ್ತಿ ಬೀಜವನ್ನು ನಾಟಿ ಮಾಡಿ. ಅದು ಬೆಳದು ಹೂವಾಗಿ, ಕಾಯಾಗಿ, ಹತ್ತಿಯಾಗಿ ಒಡೆದು. ಆ ಹತ್ತಿಯನ್ನು ನೇಯ್ದು. ಮುಂಡಾಸವನ್ನು ತಯಾರು ಮಾಡಿ ಸಾಕ್ಷಾತ್ ಶಿವ–ಪಾರ್ವತಿಯರು ಕೈಲಾಸದಿಂದ ಧರೆಗಿಳಿದು ಬಂದು ಮುಂಡಾಸು ಸುತ್ತುತ್ತಾನೆ ಎಂಬುದು ಭಕ್ತರ ನಂಬಿಕೆ. ಗುರುವಾರದ ಮಧ್ಯರಾತ್ರಿ ದೀಪಾವಳಿ ಅಮವಾಸ್ಯೆಯ ನಿಮಿತ್ತ ಮಾಳಿಂಗರಾಯನ ಮುಂಡಾಸ್‌ನ್ನು ನೋಡಲು ಜನಸಾಗರ ಮಧ್ಯರಾತ್ರಿಯಲ್ಲಿಯೇ ದೇವಾಸ್ಥಾನದ ಸುತ್ತಮುತ್ತ ಊಳಿದುಕೊಂಡಿದ್ದರು. ಇಲ್ಲಿಗೆ ಆಗಮಿಸುವ ಪ್ರತಿಯೊಬ್ಬ ಭಕ್ತರು ಭಂಡಾರವನ್ನು ದೇವಾಲಯದ ಮೇಲೆ ಎಸೆಯುವುದು ಇಲ್ಲಿನ ಸಂಪ್ರದಾಯ. ಭಂಡಾರದಲ್ಲಿ ಮಿಂದೆದ್ದ ಭಕ್ತರು ತಮ್ಮ ಜೀವನ ಪಾವನವಾಯಿತು ಎಂಬುದು ಭಕ್ತರ ನಂಬಿಕೆ. ಈ ಮುಂಡಾಸು ನೋಡಲು ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳುನಾಡು, ಗೋವಾ ಹಾಗೂ ಉತ್ತರ ಕರ್ನಾಟಕದ ಲಕ್ಷಾಂತರ ಭಕ್ತ ಸಮೂಹ ಪಾಲ್ಗೊಂಡಿದೆ. ಈ ಮುಂಡಾಸ್ ನೋಡಲು ಸುಮಾರು 6 ಲಕ್ಷಕ್ಕೂ ಅಧಿಕ ಆಗಮಿಸಿದ ಭಕ್ತರು, ಈ ಮುಂಡಾಸ್ ಯಾವ ದಿಕ್ಕಿನೆಡೆಗೆ ವಾಲಿರುತ್ತದೆ ಎಂಬುದರ ಮೇಲೆ ಮುಂಬರುವ ರಾಜಕೀಯ, ಸಾಮಾಜಿಕ ಹಾಗೂ ಮಳೆ–ಬೆಳೆಯನ್ನು ವಿಶ್ಲೇಷಿಸುವುದು ಇಲ್ಲಿನ ವಿಶೇಷ. ದೇವರುಗಳ ಭೇಟಿ: ದೇವಾಲಯದ ಎದುರಿನ ಹಳ್ಳದ ಮೈದಾನದಲ್ಲಿ ಶುಕ್ರವಾರದಂದು ಸಾಯಂಕಾಲ 3 ಗಂಟೆಗೆ ಮಾಳಿಂಗರಾಯನ ಭೇಟಿ ಕಾರ್ಯಕ್ರಮದಲ್ಲಿ ಶಿರಾಡೋಣದ ಬೀರಲಿಂಗೇಶ್ವರ, ಏಣಕಿ ಜಕರಾಯ, ಹುನ್ನೂರು ಬೀರಲಿಂಗೇಶ್ವರ ದೇವರುಗಳ ಪಲ್ಲಕ್ಕಿಗಳು ಸೇರಿದಂತೆ 30ಕ್ಕೂ ಹೆಚ್ಚು ದೇವರುಗಳ ಪಲ್ಲಕ್ಕಿಗಳು ಸೇರಿದಂತೆ ಕಂಟಲು ಎತ್ತುಗಳು ದೇವಾಲಯದ ಎದುರಿನ ಹಳ್ಳದ ಮೈದಾನದಲ್ಲಿ ಭಾಗಿಯಾ ಗುತ್ತವೆ. ಮಾಳಿಂಗರಾಯನ ಭೇಟಿಯ ವೇಳೆಯಲ್ಲಿ ಭಕ್ತರು ಭಂಡಾರ, ಖಾರಿಕ್, ಬದಾಮಿ ಹಾಗೂ ಉಣ್ಣೆ ಉತ್ತತ್ತಿಯನ್ನು ಹಾರಿಸುವ ಮೂಲಕ ಭಕ್ತರು ತಮ್ಮ ಹರಿಕೆಗಳನ್ನು ತೀರಿಸುವುದು ವಾಡಿಕೆ. ಈ ವೇಳೆಯಲ್ಲಿ ಭಕ್ತರು ಭಂಡಾರದಲ್ಲಿ ಮಿಂದೇದ್ದ ಭಕ್ತ ಸಮೂ ಹವು ಹಳದಿಮಯ ವಾಗಿರುವುದು ಕಂಡುಬಂದಿತು.

### ಕೊಟ್ಟ ಮಾತಿನಂತೆ ನಡೆಯುತ್ತಿರುವ ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಚುನಾವಣೆಯಲ್ಲಿ ಕೊಟ್ಟ ಮಾತಿನಂತೆ ಸಿಂದಗ ನಗರವನ್ನು ಶಾಸಕ ಅಶೋಕ ಮನಗೂಳಿ ಅವರು ಅಭಿವೃದ್ಧಿ ಪಡಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಕಾಂಗ್ರೆಸ್ ಮುಖಂಡೆ ಸುನಂದಾ ಯಂಪುರೆ ಹೇಳಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ 24ದಿನಗಳ ಹಿಂದೆ ಬಸವೇಶ್ವರ ವೃತ್ತದಲ್ಲಿ ಸಿಂದಗಿ ನಗರವನ್ನು ಸೌಂದರ್ಯೀಕರಣಗೊಳಿಸುವ ದಿಸೆಯಲ್ಲಿ ಬೀದಿ ದ್ವೀಪಗಳ ಕಂಬ ಅಳವಡಿಕೆಗೆ ಚಾಲನೆ ನೀಡಿದ್ದರು. ಬರುವ ದೀಪಾವಳಿಗೆ ಅಲಂಕಾರಿಕ ಬೀದಿ ದ್ವೀಪಗಳ ಕಂಬಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕ ಕೊಡಿಸುವುದಾಗಿ ಹೇಳಿದ್ದರು. ಕೊಟ್ಟ ಮಾತಿನಂತೆ ಇಮದು ದೀಪಾವಳಿ ಹಬ್ಬದಂದು ಅಲಂಕಾರಿಕ ವಿದ್ಯುತ್ ದ್ವೀಪಗಳಿಗೆ ಚಾಲನೆ ನೀಡಿದ್ದಾರೆ. ಇದಕ್ಕೆ ಸಿಂದಗಿ ನಗರದ ಜನತೆಯ ವತಿಯಿಂದ ಶಾಸಕರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಹರ್ಷವ್ಯಕ್ತಪಡಿಸುತ್ತಿದ್ದಾರೆ. ರಾಜಕೀಯ ಜೀವನದಲ್ಲಿ ಸವಾಲುಗಳನ್ನು ಎದುರಿಸಿ ಮುನ್ನಡೆಯುದೇ ನಿಜವಾದ ನಾಯಕ. ಆ ನಿಟ್ಟಿನಲ್ಲಿ ನಿಮ್ಮ ಕಾರ್ಯಗಳು ಸದಾ ಹೀಗೆ ಮುಂದುವರೆಯಲಿ ಎಂದು ಹೇಳಿದ್ದಾರೆ.

### ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಸ್ಪಷ್ಟನೆ

## ಕಳೆದೊಂದು ವರ್ಷದಲ್ಲಿ ಕೈಗಾರಿಕೋದ್ಯಮದಲ್ಲಿ 24645 ಉದ್ಯೋಗಾವಕಾಶ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಜಿಲ್ಲೆಯಲ್ಲಿ 9,300 ಲಕ್ಷ ರೂಪಾಯಿಗಳ ಬಂಡವಾಳಹೂಡಿಕೆಯೊಂದಿಗೆಸ್ಥಾಪಿತಗೊಂಡಿರುವ 4,537 ಕೈಗಾರಿಕೋದ್ಯಮಗಳಲ್ಲಿ 24,645 ಉದ್ಯೋಗಾವಕಾಶ ಕಲ್ಪಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಮತ್ತು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು ಡಾ. ಎಂ.ಬಿ.ಪಾಟೀಲ ಹೇಳಿದರು. ಜಿಲ್ಲಾಡಳಿತದ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಕೆ.ಐ.ಎ.ಡಿ.ಬಿ ಅಲಿಯಾಬಾದ ಹಂತ–3 ಹೊಸ ಕೈಗಾರಿಕಾ ಪ್ರದೇಶ ಸ್ಥಾಪನೆಗಾಗಿ 1870 ಎಕರೆ ಜಮೀನು ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ಕೈಗಾರಿಕೆ ಅಭಿವೃದ್ಧಿಗಾಗಿ ಒಟ್ಟು 3239 ಎಕರೆ ಕೈಗಾರಿಕಾ ಪ್ರದೇಶ ಅಭಿವೃದ್ಧಿಗಾಗಿ ಕ್ರಮವಹಿಸಲಾಗಿದೆ. ಈಗಾಗಲೆ 245 ಕೋಟಿ ರೂಪಾಯಿಗಳ ಬಂಡವಾಳ ಹೂಡಿ ಕೊಲ್ಹಾರ ತಾಲೂಕಿನಲ್ಲಿ 614 ಎಕರೆ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ಹೊಸ ಕೈಗಾರಿಕೆಗಳ ಸ್ಥಾಪನೆಗಾಗಿ 411 ನಿವೇಶನಗಳು ಲಭ್ಯವಿವೆ ಎಂದು ಅವರು ಹೇಳಿದರು.

ಬಬಲೇಶ್ವರ ತಾಲೂಕಿನ ಐತಿಹಾಸಿಕ ಮಮದಾಪುರ ಕೆರೆಯನ್ನು ಕೈಗಾರಿಕೆ ಇಲಾಖೆಯ ಸಿ.ಎಸ್.ಆರ್ 1 ಕೋಟಿ ರೂಪಾಯಿ ಅನುದಾನದಲ್ಲಿ ಸೌಂದರೀಕರಣ ಮಾಡಲಾಗುತ್ತಿದೆ. ಮತ್ತು ಆದಿಲ್ ಶಾಹಿಗಳ ಕಾಲದ ಬೇಸಿಗೆ ಅರಮನೆ ಪಕ್ಕದಲ್ಲಿರುವ ಕುಮಟಗಿ ಕೆರೆ ಪ್ರವಾಸೋದ್ಯಮ ಕೇಂದ್ರವನ್ನಾಗಿ ಮತ್ತು ಪಕ್ಕದ 17 ಎಕರೆ ಪ್ರದೇಶದಲ್ಲಿ ಥೀಮ್ ಪಾರ್ಕ್ ಕೈಗಾರಿಕೆ ಇಲಾಖೆಯ ಸಿ.ಎಸ್.ಆರ್.,ರೂಪಾಯಿ 2 ಕೋಟಿ ಅನುದಾನದಲ್ಲಿ ಸೌಂದರೀ ಕರಣಗೊಳಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ ವತಿಯಿಂದ ಸಿಎಸ್‌ಆರ್ ಅನುದಾನದಲ್ಲಿ ಬಬಲೇಶ್ವರ ಹಾಗೂ ತಿಕೋಟಾ ತಾಲೂಕುಗಳನ್ನು ವಿಜಯಪುರ ಜಿಲ್ಲೆಯಲ್ಲಿ ಮಾಡೇಲ್ ತಾಲೂಕುಗಳು ಎಂದು ಆಯ್ಕೆ ಮಾಡಿಕೊಂಡು ಇಲ್ಲಿನ ಆಯ್ದ 1000 ಸರಕಾರಿ ಶಾಲೆಗಳ ಕಟ್ಟಡಗಳ ದುರಸ್ಥಿ, ನಿರ್ಮಾಣ ಹಾಗೂ ಅತ್ಯಾಧುನಿಕ ಸ್ಮಾರ್ಟ್ ಕ್ಲಾಸ್ ಅಳವಡಿಕೆ ಮಾಡುವ ಕಾರ್ಯವು ಭರದಿಂದ ಸಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವಿವಿಧ ರೀತಿಯ ಡಿಜಿಟಲ್ ಸೌಕರ್ಯಗಳನ್ನು ಪೂರೈಸಿ, ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಕ್ರಮ ವಹಿಸಲಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮೇಯರ್ ಮಹೇಜಬಿನ್ ಹೊರ್ತಿ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನಾನ್ ಮುಶ್ರೀಫ್, ಉಪ ಮೇಯರ್ ದಿನೇಶ ಹಳ್ಳಿ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ಕನ್ನಡಪರ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

### ಹಲ್ಮಿಡಿ ಶಾಸನ ಪ್ರತಿಕೃತಿ ಅನಾವರಣ



ವಿಜಯಪುರ: ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕನ್ನಡದ ಮೊಟ್ಟ ಮೊದಲ ಶಾಸನ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಸಚಿವ ಡಾ.ಎಂ.ಬಿ.ಪಾಟೀಲ ಅವರು ಉದ್ಘಾಟಿಸಿದರು. ಕರ್ನಾಟಕ ಸಂಭ್ರಮ–50 "ಹೆಸರಾಯಿತು ಕರ್ನಾಟಕ–ಉಸಿರಾಗಲಿ ಕನ್ನಡ" ಅಭಿಯಾನದಡಿ ನವ್ಹೆಂಬರ್–2023 ರಿಂದಇಲ್ಲಿಯವರೆಗೆವಿವಿಧಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಅದರಲ್ಲಿ ಕನ್ನಡದ ಮೊದಲ ಶಾಸನವೆಂದು ಪರಿಗಣಿಸಲ್ಪಟ್ಟಿರುವ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಪ್ರತಿ ಜಿಲ್ಲಾ ಕೇಂದ್ರಗಳಲ್ಲಿಅಳವಡಿಸಲುಉದ್ದೇಶಿಸಲಾಗಿದ್ದು, ಅದರಂತೆ ವಿಜಯಪುರ ಜಿಲ್ಲೆಯಲ್ಲಿ ಸಾರ್ವಜನಿಕರ ವೀಕ್ಷಣೆಗಾಗಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಅಳವಡಿಸಲಾಗಿದೆ ಎಂದು ಅವರು ಹೇಳಿದರು. ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರು, ಹಲ್ಮಿಡಿ ಶಾಸನದ ಸಾಲುಗಳನ್ನು ವಿವರಿಸಿದರು.ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಸೇರಿದಂತೆ ಅನೇಕರಿದ್ದರು.

## ಕನ್ನಡ ನಾಡು ಎಂಬ ಹೆಸರೇ ಒಂದು ಧೀಮಂತ ಶಕ್ತಿ :ಸಂಜೀವ ಪಾಟೀಲ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕನ್ನಡ ಭಾಷೆಗೆ ಶ್ರೀಮಂತ ಇತಿಹಾಸವಿದ್ದು, ತನ್ನದೇ ಶ್ರೇಷ್ಠತೆಯ ಆಸ್ಮಿತೆಯನ್ನು ಹೊಂದಿದೆ. ಅನ್ಯ ಭಾಷೆಗಳ ಹಾವಳಿಗಳ ಮಧ್ಯೆಯೂ ಕನ್ನಡ ಭಾಷೆ ತನ್ನ ಗತ ವೈಭವದಿಂದ ಅಸ್ಮಿತೆ ಉಳಿಸಿಕೊಂಡು ಮಿನುಗಿದೆ. ಕನ್ನಡ ಸಂಸ್ಕೃತಿಯ ಬೆಡಗು, ಭಿನ್ನಾಣ ವೈವಿಧ್ಯಮಯವಾಗಿದೆ ಎಂದು ನಗರದ ಉದ್ಯಮಿ ಸಂಜೀವ ಪಾಟೀಲ (ಕನ್ನೂರ) ಹೇಳಿದರು. ನಗರದ ಆಶ್ರಮ ರಸ್ತೆಯಲ್ಲಿರುವ ರಾಮಕೃಷ್ಣ ಬಡಾವಣೆಯಲ್ಲಿ ಗಜಾನನ ಮಿತ್ರ ಮಂಡಳಿ ಶುಕ್ರವಾರ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಬಡಾವಣೆಯ ಹಿರಿಯರಾದ ಶ್ರೀಶೈಲ ಮಹಾಜನಶೆಟ್ಟಿ ಅವರು ನಾಡ ಧ್ವಜಾರೋಹಣ ನೆರವೇರಿಸಿದರು.ಶಿಕ್ಷಕ ಎಸ್.ಜಿ.ಹೆಬ್ಬಾಳ, ಯೋಗ ಶಿಕ್ಷಕಿ ಸಾವಿತ್ರಿ ಮಠ ಮತ್ತು ಬಡಾವಣೆಯ ಮಾಲಿಕ ಸಿದ್ರಾಮ ಅಂಜೆಖಾನೆ ಮಾತನಾಡಿ, ಕರ್ನಾಟಕ ಏಕೀಕರಣ ದಿನ ನಮಗೆಲ್ಲ ವಿಶೇಷ ದಿನವಾಗಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಹಲವು ಪ್ರಾಂತ್ಯಗಳಲ್ಲಿ ಚದುರಿ ಹೋಗಿದ್ದ ಕನ್ನಡಿಗರ ಹಲವು ಪ್ರದೇಶಗಳನ್ನು ಒಂದುಗೂಡಿಸಿ 1956 ರ ನವೆಂಬರ್ 1 ರಂದು ಏಕೀಕರಣ ಮಾಡಲಾಯಿತು. ಅಂದಿನಿಂದ ಪ್ರತಿ ವರ್ಷ ನವೆಂಬರ್ 1 ರಂದು ನಾವು ಕನ್ನಡ ರಾಜ್ಯೋತ್ಸವ ಆಚರಿಸಿಕೊಂಡ ಬಂದಿದ್ದೇವೆ. ರಾಜ್ಯೋತ್ಸವ ಸಂಭ್ರಮದ ಹಿಂದೆ ನಾಡಿನ ಏಕೀಕರಣಕ್ಕಾಗಿ ಹಗಲಿರುಳು ಶ್ರಮಿಸಿದ ಅನೇಕ ಮಹನೀಯರ ಹೋರಾಟದ ಬಲವಿದೆ. ಕನ್ನಡ ಮನಗಳು ಆಡಳಿತಾತ್ಮಕ ಹಾಗೂ ಭಾವನಾತ್ಮಕ ಐಕ್ಯತೆಯನ್ನು ಮೆರೆದಿದ್ದಾರೆ.ಆ ಮಹಾನ ಚೇತನಗಳನ್ನೆಲ್ಲಾ ಇಂದು ಕೃತಜ್ಞತೆಯಿಂದ ಸ್ಮರಿಸಬೇಕು. ಏಕೆಂದರೆ ಆ ಮಹಾನುಭಾವರು ಕನ್ನಡ ಭಾಷಿಕರ ರಾಜ್ಯವನ್ನಾಗಿ ಕನಾ9ಟಕ ರೂಪುಗೊಳ್ಳಲು ಶ್ರಮಿಸಿದ್ದಾರೆ ಎಂದರು.

ಈರಣ್ಣ ಧಾರವಾಡಕರ, ವಿಶ್ವನಾಥ್ ಕೋಟಿನ, ಮಂಜುನಾಥ ಹೂಗಾರ, ಜಂಗಮಶೆಟ್ಟಿ, ಕೆಇಬಿ ಅಭಿಯಂತರ ಗೋಳಸಂಗಿ, ರವಿ ಉಮರ್ಜಿ, ರಾಜು ಹುನ್ನೂರ, ಬಿ. ಬಿ. ರಜಪೂತ, ಒ.ಕನಕರೆಡ್ಡಿ, ಎ. ಪಿ.ರಜಪೂತ, ಕಿಶೋರ್ ಮೇತ್ರೆ, ಸುಚಿತಾ ಮೇತ್ರೆ. ಸ್ವಾತಿ ಅಂಜಿಖಾನೆ, ಶೈಲಜಾ ಪಾಟೀಲ, ಗೀತಾ ಕೋಟಿನ, ರಾಜೇಶ್ವರಿ ಹೂಗಾರ, ರೂಪಾ ಹೊಸಮನಿ, ಸುನೀತಾ ರಜಪೂತ ಸೇರಿದಂತೆ ಅನೇಕರಿದ್ದರು

"ಕನ್ನಡ ನಾಡಿನಲ್ಲಿ ಕನ್ನಡವೇ ಪ್ರಥಮ, ಪ್ರಧಾನ, ಸಾರ್ವಭೌಮ ಭಾಷೆ. ಶಿವಶರಣರು, ದಾಸರು, ಕವಿ–ಸಾಹಿತಿಗಳಿಂದ ಕಂಗೊಳಿಸುವ ಕನ್ನಡ ನಾಡು ಎಂಬ ಹೆಸರೇ ಒಂದು ಧೀಮಂತ ಶಕ್ತಿ. ಕನ್ನಡ ಅನ್ನದ ಭಾಷೆ, ಜೀವದ ಭಾಷೆ, ಪವಿತ್ರ ಭಾಷೆ, ಹೃದಯದ ಭಾಷೆಯಾಗಿ ನಾವು ಕಾಣಬೇಕಿದೆ. ನಾವೆಲ್ಲ ಕೇವಲ ನವೆಂಬರ್ ಕನ್ನಡಿಗರಾಗದೆ ನಂ.1 ಕನ್ನಡಿಗರಾಗೋಣ. ನಂ.1 ಕನ್ನಡಿಗರಾದರೆ ಸಾವಿರ ಸಾವಿರ ವರ್ಷಗಳ ಸುದೀರ್ಘ ಇತಿಹಾಸವನ್ನು ನಾವು ಕಾಣಬಹುದಾಗಿದೆ."



■ - ಸಂಜೀವ ಪಾಟೀಲ (ಕನ್ನೂರ) ಉದ್ಯಮಿ, ವಿಜಯಪುರ

## 25 ಸಾಧಕರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ





ವಿಜಯಪುರ: ಹಿರಿಯ ಪತ್ರಕರ್ತರಾದ ಮೋಹನ ಕುಲಕರ್ಣಿ, ಬಸವರಾಜ ಉಳ್ಳಾಗಡ್ಡಿ, ಮಲ್ಲಿಕಾರ್ಜುನ ಸೊನ್ನದ, ಟಿವಿ9 ಕ್ಯಾಮೆರಾಮನ್ ಶ್ರೀಶೈಲ ಕೊಟ್ಟಲಗಿ ಸೇರಿ ಕೆಳಕಂಡ 25 ಜನ ಸಾಧಕರಿಗೆ ಈ ಬಾರಿಯ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು.

**ಶಿಲ್ಪಕಲೆ:** 1.ಷಣ್ಮುಖಪ್ಪ ದೇವೇಂದ್ರಪ್ಪ ಪತ್ತಾರ–ಸಾರವಾಡ

**ಚಿತ್ರಕಲೆ:** 2.ಹುಸೇನ ಹುನೇರ ಅಲಿಶಾ ಮಕಾನದಾರ–ತಾಳಿಕೋಟೆ ಬಯಲಾಟ: 3.ಯಲ್ಲಪ್ಪ ಈರಪ್ಪ ಗೊಂದಳಿ–ಸಾರವಾಡ

**ಜಾನಪದ ಕ್ಷೇತ್ರ:** 4.ಅದವ್ವಾ ಚಂದಪ್ಪ ಕದ್ರಿ–ಹಡಗಲಿ, 5.ಸಿದ್ದಪ್ಪ ಗುರುಪಾದಪ್ಪ ಅಲಗೊಂಡ (ಜೋಗತಿ)–ಮನಗೂಳಿ, 6.ಶಾಂತಾಬಾಯಿ ಲಚ್ಚು ನಾಯಕ–ವಿಜಯಪುರ

**ಸಮಾಜ ಸೇವೆ:** 7.ಬಸವರಾಜ ಮಡಿವಾಳಪ್ಪ ಪಾಟೀಲ–ವಿಜಯಪುರ, 8.ಮಹಾವೀರ ಭರಮಪ್ಪ ನಗರಿ–ಮುದ್ದೇಬಿಹಾಳ, 9.ಚನ್ನಬಸಯ್ಯ ಸಿದ್ದರಾಮಯ್ಯ ಹಿರೇಮಠ–ವಿಜಯಪುರ, 10.ಶ್ರೀಕಾಂತ ದಶರಥ ಬಿರಾದಾರ–ಹಂಚಿನಾಳ, 11.ಮಲ್ಲು ಸಾಬು ಬಿದರಿ–ತಾಜಪೂರ, 12.ಸುರೇಶ ಸೋಮಲಿಂಗ ಗೊಣಸಗಿ–ದೇವರ ನಿಂಬರಗಿ

**ವೈದ್ಯಕೀಯ:** 13.ಶಿವಾನಂದ ಸಿದ್ರಾಮಪ್ಪ ಜಂಗಿನಮಠ–ವಿಜಯಪುರ, 14.ಬಾಬು ಬಸಪ್ಪ ಕುಚನೂರ–ವಿಜಯಪುರ

**ಮಾಧ್ಯಮ ಕ್ಷೇತ್ರ:** 15.ಮಲ್ಲಿಕಾರ್ಜುನ ಯಲ್ಲಣ್ಣ ಸೊನ್ನದ–ಮುದ್ದೇಬಿಹಾಳ, 16.ಮೋಹನ ಪಾಂಡುರಂಗ ಕುಲಕರ್ಣಿ–ವಿಜಯಪುರ, 17.ಬಸವರಾಜ ಶಂಕರಪ್ಪ ಉಳ್ಳಾಗಡ್ಡಿ–ವಿಜಯಪುರ, 18.ಶ್ರೀಶೈಲ ಬಾಳಪ್ಪ ಕೊಟ್ಟಲಗಿ–ವಿಜಯಪುರ

**ಸಾಹಿತ್ಯ:** 19.ಬಿಂದುರಾವ್ ರಾಮರಾವ ನಾಡಗೌಡ–ವಿಜಯಪುರ, 20.ದ್ರಾಕ್ಷಾಯಿಣಿ ರಮೇಶ ಬಿರಾದಾರ–ಅಗಸಬಾಳ

**ರಂಗಭೂಮಿ:** 21.ಮಹಾದೇವಪ್ಪ ಈರಪ್ಪ ಹುಣಶ್ಯಾಳ–ದೇವರ ನಾವದಗಿ

ಶಿಕ್ಷಣ: 23.ಡಾ. ಮಲ್ಲಿಕಾರ್ಜುನ ಲಕ್ಷ್ಮಣ ವಡ್ಡರ–ಕಲಕೇರಿ, 24.ಶಿವಕುಮಾರ ಕುಡ್ಲೆಪ್ಪ ಬಾಗಿ–ವಿಜಯಪುರ

**ಸಂಗೀತ:** 24.ಶ್ರೀಕಾಂತ ವೀರಭದ್ರಪ್ಪ ಬಡಿಗೇರ–ಉಕ್ಕಲಿ

**ಸಂಕೀರ್ಣ:** 25.ಅವಲೇಶ ರಾಜೇಶ ಮುಲ್ಲಾ–ಮುದ್ದೇಬಿಹಾಳ.

# ಭೂದಾಖಲೆಯಲ್ಲಿ ವಕ್ಫ್ ಹೆಸರನ್ನು ಸೇರಿಸಿದ್ದು ಬಿಜೆಪಿ :ಎಂ.ಬಿ.ಪಾಟೀಲ್

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಕ್ಫ್ ವಿವಾದಕ್ಕೆ ಸಂಬಂಧಿಸಿದಂತೆ ಜಮೀರ್ ಅಹಮದ್ ಖಾನ್ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಆಗ್ರಹಿಸುತ್ತಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ವಿರುದ್ಧ ಸಚಿವ ಎಂ.ಬಿ.ಪಾಟೀಲ್ ಕಿಡಿಕಾರಿದ್ದಾರೆ.

ನಗರದಲ್ಲಿ ಶುಕ್ರವಾರ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಬಿಜೆಪಿಯವರು ರೈತರಿಗೆ ನೋಟಿಸ್ ನೀಡಿದ್ದಲ್ಲದೆ, ಭೂದಾಖಲೆಯಲ್ಲಿ ವಕ್ಫ್ ಹೆಸರನ್ನೂ ಸೇರಿಸಿದ್ದಾರೆ ಎಂದು ಆರೋಪಿಸಿದರು.

ಇದೇ ವೇಳೆ ರೈತರ ಹೆಸರನ್ನು ಪಟ್ಟಿ ಮಾಡಿದ ಸಚಿವರು, ಬಿಜೆಪಿಯವರು ಭೂ ದಾಖಲೆಗಳಲ್ಲಿ ವಕ್ಫ್ ಹೆಸರನ್ನುನಮೂದಿಸಿಭೂಮಿಯನ್ನುಕಬಳಿಸಿಕೊಂಡಿರುವ ರೈತರ ಪಟ್ಟಿ ಇದಾಗಿದೆ. ಹಿಂದಿನ ಬಿಜೆಪಿ ಸರ್ಕಾರವು ವಕ್ಫ್ ಭೂಮಿ ಎಂದು ಭೂಮಿಯನ್ನು ವಶಕ್ಕೆ ಪಡೆದುಕೊಂಡಿದೆ ಎಂದು ಹೇಳಿದರು. ಜಮೀರ್ ಅವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಹಿಂದೂಗಳ ಹೋರಾಟಗಾರರು ಎಂದು ಕರೆಸಿಕೊಳ್ಳುವವರು ಕೆಲವರು ಒತ್ತಾಯಿಸುತ್ತಿದ್ದಾರೆ. ರಾಜ್ಯದಲ್ಲಿ ನಡೆಯಲಿರುವ ಉಪಚುನಾವಣೆ ಮತ್ತು ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಗಳಲ್ಲಿ ರಾಜಕೀಯ ಮಾಡಲು ಬಿಜೆಪಿ ವಕ್ಫ್ ವಿಷಯವನ್ನು ಎತ್ತುತ್ತಿದೆ ಎಂದು ಕಿಡಿಕಾರಿದರು.

ಸರ್ಕಾರ ರೈತರಿಂದ ಒಂದು ಇಂಚು ಭೂಮಿಯನ್ನು ಸಹ ಕಸಿದುಕೊಳ್ಳುತ್ತಿಲ್ಲ ಮತ್ತು ಭೂ ದಾಖಲೆಗಳನ್ನು ಸರಳೀಕರಿಸಲು ಯೋಜಿಸುತ್ತಿದೆ. 1974ರಲ್ಲಿ ಕಣ್ತಪ್ಪಿನಿಂದ ವಿಜಯಪುರ ನಗರದ ಮಹಾಲಬಾಗಾಯತನ ಸರ್ವೇ ನಂಬರ್ ಗಳ ಮುಂದೆ ಹೊನವಾಡ ಎಂದು ಸೇರಿದ್ದರಿಂದಾಗಿ ಈ ಲೋಪವಾಗಿದೆ. ಆ ಬಳಿಕ 1977ರಲ್ಲಿ ಹೊನವಾಡ ಎಂಬುದನ್ನು ತೆಗೆದು ಹಾಕಲಾಗಿದೆ. ರೈತರ ಭೂಮಿ ಕೊಳ್ಳೆ ಹೊಡೆಯಲಾಗುತ್ತಿದೆ ಎಂದು ಸುಳ್ಳು ಸುದ್ದಿ ಹಬ್ಬಿಸಲಾಗುತ್ತಿದ್ದು, ಸರ್ಕಾರ ಯಾವುದೇ ರೈತರ ಒಂದು ಒಕರೆ ಜಮೀನನ್ನೂ ಕೂಡ ವಕ್ಫ್ ಗೆ ನೀಡಿಲ್ಲ. ಹೊನವಾಡದಲ್ಲಿ ವಕ್ಫ್ ಆಸ್ತಿ 1200 ಎಕರೆ ಇಲ್ಲ. ಅಲ್ಲಿರುವುದೇ ಕೇವಲ 10 ಎಕರೆ 29 ಗುಂಟೆ ಮಾತ್ರ ಎಂದು ಸ್ಪಷ್ಟಪಡಿಸಿದರು.

# ಬೀದಿ ಬದಿ ವ್ಯಾಪಾರಿಗಳಿಗೆ ಸಹಕಾರ ನೀಡಿ :ನಾರಾಯಣಕರ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಬೆಳಕಿನ ಹಬ್ಬ ದೀಪಾವಳಿ ಸಂಭ್ರಮ ಜೋರಾಗುತ್ತಿದ್ದಂತೆ ನಗರದಲ್ಲಿ ಅಂಗಡಿ ಮುಂಗಟುಗಳ ತೆರವು ಕಾರ್ಯಾಚರಣೆ ಚುರುಕುಗೊಂಡಿದೆ ಆದರೆ ಸಿದ್ದಲಿಂಗ ಶ್ರೀಗಳ (ಹಳೆಯ ಎಸ್.ಬಿ.ಐ) ರಸ್ತೆಯ ಅಂಗಡಿಗಳ ಸಣ್ಣ ಪುಟ್ಟ ವ್ಯಾಪಾರಸ್ಥರು ಬೀದಿಗೆ ಬರುವ ಪರಿಸ್ಥಿತಿ ಉದ್ಭವವಾಗಿದೆ. ಕಳೆದ 2013 ರಲ್ಲಿ ಮಾಸ್ಟರ್ ಪ್ಲಾನ್ ನಲ್ಲಿ ಅಂಗಡಿಗಳು ತೇರುವಾಗಿದ್ದು, ಸದ್ಯಕ್ಕೆ ಎರಡು ಬದಿಯ ಚರಂಡಿ ಮೇಲಿರುವ ಅಂಗಡಿಗಳನ್ನು ಮಾತ್ರ ತೆರವುಗೊಳಿಸಿ ವ್ಯಾಪಾರಸ್ಥರಿಗೆ ಅನುಕೂಲ ಮಾಡಿಕೊಡಬೇಕೆಂದು ಪುರಸಭೆ ಉಪಾಧ್ಯಕ್ಷ ರಾಜಣ್ಣ ನಾರಾಯಣಕರ ಹೇಳಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪಟ್ಟಣದಲ್ಲಿ ದಿನದಿಂದ ದಿನಕ್ಕೆ ಅಂಗಡಿ ಮುಂಗಟ್ಟುಗಳ ತೆರವು ಕಾರ್ಯಾಚರಣೆ ಚುರುಕುಗೊಂಡಿದ್ದು ಸಂತಸದ ವಿಷಯ. ಅದರಿಂದ ಪಟ್ಟಣ ಅಭಿವೃದ್ಧಿಯಾಗುವ ಎಲ್ಲ ಗುಣಲಕ್ಷಣಗಳು ಕಾಣುತ್ತಿವೆ. ಬಸ್ ನಿಲ್ದಾಣದಿಂದ ಹಳೆಯ ಮೋರಟಗಿ ರೋಡವರೆಗೆ ಮದ್ಯ ರಸ್ತೆಯಿಂದ 45 ಫಿಟ್ ವ್ಯಾಪಾರಸ್ಥರು ತಮ್ಮ ಅಂಗಡಿಗಳನ್ನು ಸ್ವಯಂ ಪ್ರೇರಿತವಾಗಿ ಈಗಾಗಲೇ ತೆರವು ಮಾಡಿಕೊಳ್ಳುತ್ತಿದ್ದಾರೆ. ಈ ಕಾರ್ಯ ಈಗಾಗಲೇ ಟಿಪ್ಪು ಸುಲ್ತಾನ್ ವೃತ್ತದವರೆಗೂ ಬಂದು ತಲುಪಿದೆ. ಟಿಪ್ಪು ಸುಲ್ತಾನ ವೃತ್ತದ ರಸ್ತೆಯಿಂದ ಇನ್ನೂಳಿದ ಅಂಗಡಿಗಳನ್ನು ಸಹ ಇದೇ ರೀತಿ ತೆರವು ಮಾಡಲಿದ್ದಾರೆ. ಇನ್ನೂ ತೊಂಟದ ಸಿದ್ದಲಿಂಗ ಶ್ರೀಗಳ (ಹಳೆಯ ಎಸ್.ಬಿ.ಐ) ರಸ್ತೆಯಲ್ಲಿ ಎರಡು ಭಾಗದಲ್ಲಿ ಚರಂಡಿ ಮೇಲಿರುವ ಅಂಗಡಿಗಳನ್ನು ಮಾತ್ರ ತೆರುವುಗೊಳಿಸಬೇಕು. ಅದನ್ನು ಮೀರಿ ತೆರವಿಗೆ ಮುಂದಾದರೆ ವ್ಯಾಪಾರವನ್ನೇ ನಂಬಿಕೊಂಡು ಬದುಕುತ್ತಿರುವ ಕುಟುಂಬಗಳು ಬೀದಿಗೆ ಬರುವ ಎಲ್ಲ ಲಕ್ಷಣಗಳು ಎದ್ದು ಕಾಣುತ್ತಿವೆ. ಇದನ್ನು ಪುರಸಭೆ ಅಧ್ಯಕ್ಷರು ಹಾಗೂ ಮುಖ್ಯಾಧಿಕಾರಿಗಳು ಮತ್ತು ಸ್ಥಳೀಯ ಶಾಸಕರು ಸೂಕ್ಷ್ಮವಾಗಿ ಗಮನಿಸಿ ವ್ಯಾಪಾರಸ್ಥರ ಸಂಕಷ್ಟವನ್ನು ಆಲಿಸಿ ಅಂಗಡಿಗಳ ತೆರವಿಗೆ ಅನುಕೂಲು ಮಾಡಿಕೊಡಬೇಕು ಎಂದು ಮನವಿ ಮಾಡಿದ್ದಾರೆ.

# ಬಸ್ ಹತ್ತುವಾಗ ವ್ಯಾನಿಟಿಬ್ಯಾಗ್ ಚೈನ್ ತೆರೆದು ಚಿನ್ನಾಭರಣ ಕಳ್ಳತನ

ಕಲಬುರಗಿ: ಬಸ್ ಹತ್ತುವಾಗ ಮಹಿಳೆಯ ಸುಮಾರು 3,32,600ರೂ.ಗಳ ಮೌಲ್ಯದ ಚಿನ್ನಾಭರಣಗಳನ್ನು ಹೊಂದಿದ್ದ ವ್ಯಾನಿಟಿ ಬ್ಯಾಗನ್ನು ಯಾರೋ ಕದ್ದು ಪರಾರಿಯಾಗಿದ್ದಾರೆ. ನಗರದ ಹೀರಾಪೂರ್ ರಮಾಬಾಯಿ ಅಂಬೇಡ್ಕರ್ ನೀರಿನ ಟ್ಯಾಂಕ್ ಹತ್ತಿರದ ನಿವಾಸಿ ಶ್ರೀಮತಿ ಮಲ್ಲಮ್ಮ ಗಂಡ ಬಾಬುರಾವ್ ಉದ್ದನ್ (26) ಎಂಬ ಮಹಿಳೆಯೇ ಚಿನ್ನಾಭರಣ ಕಳೆದುಕೊಂಡ ನತದೃಷ್ಟೆಯಾಗಿದ್ದಾಳೆ.

ದೀಪಾವಳಿ ಹಬ್ಬದ ಪ್ರಯುಕ್ತ ತವರುಮನೆ ವ್ಹಿ.ಕೆ ಸಲಗರ್ ಗ್ರಾಮಕ್ಕೆ ಹೋಗುವುದಕ್ಕಾಗಿ ಹೀರಾಪೂರನಲ್ಲಿರುವ ಮನೆಯಿಂದ ತಾಯಿ ಹಾಗೂ ಪತಿಯೊಂದಿಗೆ ಮಧ್ಯಾಹ್ನ ದ್ವಿಚಕ್ರವಾಹನದ ಮೇಲೆ ಮನೆಯಿಂದ ಹೊರಟು ನೆಹರು ಗಂಜ್ ಬಸ್ ನಿಲ್ದಾಣಕ್ಕೆ 02:30 ಗಂಟೆಗೆ ಮಲ್ಲಮ್ಮ ಹೋಗಿದ್ದರು. ತಾಯಿಯೊಂದಿಗೆ ನಗರದ ನೆಹರು ಗಂಜ್ ಬಸ ಸ್ಟ್ಯಾಂಡನಲ್ಲಿ ಬಸ್ಸಿಗಾಗಿ ಕಾಯುತ್ತಿರುವಾಗ ಮಧ್ಯಾಹ್ನ 03:00 ಗಂಟೆ ಸುಮಾರಿಗೆ ನಮ್ಮ ತವರು ಮನೆ ಊರಾದ ವ್ಹಿ.ಕೆ ಸಲಗರ ಗ್ರಾಮಕ್ಕೆ ಹೋಗುವ ಬಸ್‌ನಲ್ಲಿ ಸೈಡಿಗೆ ವ್ಯಾನಿಟಿ ಬ್ಯಾಗ್ ಹಾಕಿಕೊಂಡು ತನ್ನ ತಾಯಿಯೊಂದಿಗೆ ಹತ್ತುವಾಗ ನನ್ನ ವ್ಯಾನಿಟಿ ಬ್ಯಾಗಿನಲ್ಲಿದ್ದ ಚಿನ್ನಾಭರಣಗಳನ್ನು ಚೈನ್ ಎಳೆದು ದೋಚಿ ಪರಾರಿಯಾಗಿದ್ದಾರೆ.

# ಕನ್ನಡದ ಕಂಪನ್ನು ಜಗತ್ತಿನೆಲ್ಲೆಡೆ ಪಸರಿಸಿ :ಕಾಮರಾಜ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಕನ್ನಡ ಭಾಷೆಗೆ ತನ್ನದೇ ಆದ ವೈಶಿಷ್ಟತೆ ಇದೆ. ಪ್ರತಿಯೊಬ್ಬ ಕನ್ನಡಿಗ ಕನ್ನಡದ ಕಂಪನ್ನು ಜಗತ್ತಿನೆಲ್ಲೆಡೆ ಪಸರಿಸಬೇಕು ಎಂದು ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಹೇಳಿದರು.

ಪಟ್ಟಣದ ತಹಶೀಲ್ದಾರ ಕಚೇರಿಯ ಆವರಣದಲ್ಲಿ ತಾಲೂಕಾಡಳಿತದ ವತಿಯಿಂದ ರಾಜ್ಯೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದ ಅತಿಥಿಯಾಗಿ ಅವರು ಮಾತನಾಡಿದರು. ಆಗಿನ ಕರ್ನಾಟಕವನ್ನು ಮೈಸೂರು ರಾಜ್ಯ ಅಂತ ಕರೆಯಲಾಗುತ್ತಿತ್ತು. 1956 ರಲ್ಲಿ ಕರ್ನಾಟಕ ರಾಜ್ಯವನ್ನಾಗಿ ಘೋಷಿಸಲಾಯಿತು. ಅಂದಿನಿಂದ ಪ್ರತೀ ವರ್ಷ ನ.1 ರ ದಿನವನ್ನು ಹಬ್ಬವನ್ನಾಗಿ ಆಚರಿಸುತ್ತ ಬರಲಾಗಿದೆ. ಈ ಬಾರಿ ದೀಪಾವಳಿ ಹಬ್ಬವಿದ್ದರೂ ಆರಣೆಯಲ್ಲಿ ಹಲವು ಜನ ಭಾಗಿಯಾಗಿದ್ದು ಸಂತಸ ತಂದಿದೆ ಎಂದರು. ಕಾರ್ಯಕ್ರಮದಲ್ಲಿ ಕನ್ನಡ ಭಾಷೆಯಲ್ಲಿ 125ಕ್ಕೆ 125 ಅಂಕ ಪಡೆದ ತಾಲೂಕಿನ 34 ವಿದ್ಯಾರ್ಥಿಗಳನ್ನು, ಸಾಹಿತಿಗಳಾದ ಶಿವಪುತ್ರ ಅಜಮನಿ, ಐ.ಬಿ.ಹಿರೇಮಠ, ಎಚ್.ಆರ್.ಬಾಗವಾನ, ಪ್ರಕಾಶ ನರಗುಂದ ಮತ್ತು ಸಾರಿಗೆ ಬಸ್ ನ್ನು ತಮ್ಮಸ್ವಂತಖರ್ಚಿನಿಂದಅಲಂಕೃತಗೊಳಿಸಿದ್ದ ಚಾಲಕ ಹಾಗೂ ನಿರ್ವಾಹಕರನ್ನು ಗೌರವಿಸಲಾಯಿತು. ಸ್ತಬ್ಧ ಚಿತ್ರಗಳ ಮೆರವಣಿಗೆಯಲ್ಲಿ ಆಕರ್ಷಕವಾಗಿದ್ದ 3 ಶಾಲಾ ತಂಡಗಳಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಹಸೀಲ್ದಾರ ಬಲರಾಮ ಕಟ್ಟಿಮನಿ ಅಧ್ಯಕ್ಷೀಯ ನುಡಿಗಳನ್ನಾಡಿದರು.

ತಾಪಂ ಇಓ ನಿಂಗಪ್ಪ ಮಸಳಿ, ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ, ಪ್ರಥಮ ಪ್ರಜೆ ಮಹೆಬೂಬ ಗೊಳಸಂಗಿ, ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ಪುರಸಭೆ ಸದಸ್ಯ ಚನ್ನಪ್ಪಣ್ಣ ಕಂಠಿ, ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್.ಮುದ್ನೂರ, ವಿವಿಧ ಕನ್ನಡ ಪರ ಸಂಘಟನೆಗಳ ಅಧ್ಯಕ್ಷರುಗಳಾದ ಮಂಜುನಾಥ ಕೊಪ್ಪ, ಸಂಗಯ್ಯ ಸಾರಂಗಮಠ, ವಿರೇಶ ಗುರುಮಠ, ರಾಜುಗೌಡ ತುಂಬಗಿ, ಪ್ರಶಾಂತ ಕಾಳೆ, ಹುಸೇನ ಮುಲ್ಲಾ ಕಾಳಗಿ, ರುದ್ರು ಮುರಾಳ ಸೇರಿದಂತೆ ಮತ್ತೀತರರು ಇದ್ದರು. ಸಂಗಮೇಶ ಶಿವಣಗಿ ತಂಡದವರು ನಾಡಗೀತೆ ಹಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ಸಾವಳಗಿ ಉಪನ್ಯಾಸ ನೀಡಿದರು.

ಕಸಾಪ ಮಾಜಿ ಅಧ್ಯಕ್ಷ ಮಹಾಂತಪ್ಪ ನಾವದಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಕ್ಷರ ದಾಸೋಹದ ಅಧಿಕಾರಿ ಎಂ.ಎಂ.ಬೆಳಗಲ್ಲ ಸ್ವಾಗತಿಸಿದರು. ಶಿಕ್ಷಕ ಟಿ.ಡಿ.ಲಮಾಣಿ ಕಾರ್ಯಕ್ರಮ ನಿರ್ವಹಿಸಿದರು.

# ಕನ್ನಡವ ಉಳಿಸಿ ಬೆಳೆಸುವ ಕಾರ್ಯ ನಾವೆಲ್ಲ ಮಾಡಬೇಕಿದೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕನ್ನಡ ಸಾಹಿತ್ಯಕ್ಕೆ 2ಸಾವಿರ ವರ್ಷಗಳ ಇತಿಹಾಸವಿದೆ. ಈ ಕನ್ನಡವನ್ನು ಉಳಿಸಿ ಬೆಳೆಸುವ ಕಾರ್ಯ ನಾವು ಮಾಡಬೇಕಾಗಿದೆ. ಕಾವೇರಿ ನದಿಯಿಂದ ಗೋದಾವರಿಯವರೆಗೆ ಕನ್ನಡದ ಕಂಪು ಮೊಳಗಿದೆ. ಕನ್ನಡದ ಮೊದಲ ಕಹಳೆಯನ್ನು ಮೊಳಗಿಸಿದ್ದು ಆಲೂರ ವೆಂಕಟರಮಣರು ಎಂದು ಸಿಂದಗಿ ಸರಕಾರಿ ಹೆಣ್ಣು ಮಕ್ಕಳ ಶಾಲೆಯ ಮುಖ್ಯಗುರು ಶರಣಬಸವ ಲಂಗೋಟಿ ಹೇಳಿದರು. ಶುಕ್ರವಾರ ನಗರದ ಬಸವ ಮಂಟಪದಲ್ಲಿ ತಾಲೂಕು ಆಡಳಿತ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಹಮ್ಮಿಕೊಂಡ 2024ರ ಕರ್ನಾಟಕ ರಾಜ್ಯೋತ್ಸವದಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ನಾವೆಲ್ಲರೂ ನವೆಂಬರ್ ಕನ್ನಡಿಗರಾಗದೇ ನಂ:01 ಕನ್ನಡಿಗರಾಗೋಣ. ನಂ:01 ಕನ್ನಡಿಗರಾದರೇ ಸಾವಿರ ಸಾವಿರ ವರ್ಷಗಳ ಸುದೀರ್ಘ ಇತಿಹಾಸವನ್ನು ನಾವೆಲ್ಲ ಕಾಣುತ್ತೇವೆ. ಕನ್ನಡ ನಾಡನ್ನು ಕನ್ನಡ ನಾಡು, ಶ್ರೀಗಂಧದ ನಾಡು, ಕರುನಾಡ ನಾಡು, ಸಾಧು–ಸಂತರು, ದಾಸರು, ಶಿವಶರಣರು ಹಾಗೂ ಕವಿಗಳಿಂದ ಕಂಗೊಳಿಸುತ್ತಿರುವ ಕನ್ನಡ ನಾಡು ಎಂಬ ಹೆಸರೇ ಒಂದು ಧೀಮಂತ ಶಕ್ತಿ. ಕನ್ನಡ ಅನ್ನದ ಭಾಷೆ, ಜೀವದ ಭಾಷೆ, ಪವಿತ್ರ ಭಾಷೆ, ಹೃದಯ ಭಾಷೆಯಾಗಿ ನಾವು ಕಾಣಬೇಕಾಗಿದೆ ಎಂದರು. ಇದೇ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ಪುರಸಭೆ ಅಧ್ಯಕ್ಷ ಶಾಂತವೀರ ಬಿರಾದಾರ ವಹಿಸಿದ್ದರು. ರೇಷ್ಮೆ ಇಲಾಖೆಯ ನಿರೀಕ್ಷಿಕ ವಿಜಯ ಯಂಕಂಚಿ ಮಾತನಾಡಿದರು. ಸಿಂದಗಿ ನಗರದಲ್ಲಿ ಶುಕ್ರವಾರದಂದು ಕನ್ನಡ ರಾಜ್ಯೋತ್ಸವದ ಸಡಗರ ಮುಗಿಲು ಮುಟ್ಟಿತ್ತು. ತಾಲೂಕು ಆಡಳಿತ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು, ಕಾರ್ಯನಿರತ ಪತ್ರಕರ್ತರ ಸಂಘ, ಕನ್ನಡ ಮನಸುಗಳ ಸಹಯೋಗದೊಂದಿಗೆ ಎಂಟು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರಗಳ ಜೊತೆಗೆ ಅವರ ಅವರ ಕೃತಿಗಳ ಮೆರವಣಿಗೆ ಮಾಡಲಾಯಿತು. ಈ ಮೊದಲು ತಾಲೂಕು ಆಡಳಿತ ಆವರಣದಲ್ಲಿ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಧ್ವಜಾರೋಹಣ ನಡೆಸಿದರು. ಶಾಸಕ ಅಶೋಕ ಮನಗೂಳಿ ಕನ್ನಡ ಧ್ವಜಾರೋಹಣ ನಡೆಸಿದರು. ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕಗಳನ್ನು ಪಡೆದ ವಿದ್ಯಾರ್ಥಿಗಳ ಜೊತೆಗ ಕನ್ನಡ ವಿಷಯ ಬೋಧಿಸಿದ ಶಿಕ್ಷಕರಿಗೆ ಕಲಾವಿದರಿಗೆ ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯ ಮೇಲೆ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ರಾಮು ಅಗ್ನಿ, ಪುರಸಭೆ ಉಪಾಧ್ಯಕ್ಷ ರಾಜಣ್ಣ ನಾರಾಯಣಕರ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಭವಾನಿ ಪಾಟೀಲ, ರೇಷ್ಮೆ ಇಲಾಖೆಯ ನಿರೀಕ್ಷಕ ವಿಜಯ ಯಂಕಂಚಿ, ಕ್ಷೇತ್ರ ಶಿಕ್ಷಣಾಧಿಕಾರಿ ಮಹಾಂತೇಶ ಯಡ್ರಾಮಿ, ಪುರಸಭೆ ಮುಖ್ಯಾಧಿಕಾರಿ ಎಸ್.ರಾಜಶೇಖರ, ಅಶೋಕ ತೆಲ್ಲೂರ, ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ ಪಿಎಸ್‌ಐ ಆರೀಫ್ ಮುಷಾಪುರಿ ಇದ್ದರು. ಇದೇ ಸಂದರ್ಭದಲ್ಲಿ ಪುರಸಭೆ ಸದಸ್ಯ ಸಂದೀಪ ಚೌರ, ಹಾಸಿಂ ಆಳಂದ, ಬಸವರಾಜ ಯರನಾಳ, ಕಾಂದಾಯ ನಿರೀಕ್ಷಕ ಆಯ್.ಎ.ಮಕಾಂದಾರ, ಚಂದ್ರಶೇಖರ ದೇವರೆಡ್ಡಿ, ಮಲಕಣ್ಣ ಗೊಟಗುಣಕಿ, ಶ್ರೀಶೈಲ ಯಳಮೇಲಿ, ಸಂತೋಷ ಮಣಿಗೇರಿ, ಮಲ್ಲನಗೌಡ ಪಾಟೀಲ ಇಬ್ರಾಹಿಂಪುರ, ಅಂಬಿಕಾ ಪಾಟೀಲ, ಅಶೋಕ ಅಲ್ಲಾಪೂರ, ಸದ್ದಾಂ ಆಲಗೂರ, ಸುನಂದಾ ಯಂಪುರೆ, ನಿಖಿಲಅಹ್ಮದ್ ಖಾನಾಪುರ, ಎಂ.ಎ.ಗೊಟಗುಣಕಿ, ಕಸಾಪ ನಿಕಟಪೂರ್ವ ಅಧ್ಯಕ್ಷ ರಾಜಶೇಖರ ಕೂಚಬಾಳ, ಬಸವರಾಜ ಐರೋಡಗಿ, ಎಂ.ಎಂ.ಹಂಗರಗಿ, ಮಲ್ಲನಗೌಡ ಪಾಟೀಲ ಇಬ್ರಾಹಿಂಪೂರ, ಚಂದ್ರಶೇಖರ ನಾಗರಬೆಟ್ಟ, ಎಸ್.ಎನ್.ಕೋರವಾರ, ಶ್ರೀಶೈಲ ಯಳಮೇಲಿ, ವೈ.ಸಿ.ಮಯೂರ ಸೇರಿದಂತೆ ಕಾರ್ಯಕ್ರಮದಲ್ಲಿ ವಿವಿಧ ಶಾಲೆಯ ಶಿಕ್ಷಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ರಾಗರಂಜಿನಿ ಸಂಗೀತ ಸಂಸ್ಥೆಯ ಮುಖ್ಯಸ್ಥ ಡಾ.ಪ್ರಕಾಶ ಮೂಡಲಗಿ ಪ್ರಾರ್ಥಿಸಿದರು. ದೈಹಿಕ ನಿರ್ದೇಶಕ ರವಿ ಗೋಲಾ ನಿರೂಪಿಸಿದರು. ತಾಪಂ ಕಾರ್ಯ ನಿರ್ವಾಹಕ ಅಧಿಕಾರಿ ರಾಮು ಅಗ್ನಿ ಸ್ವಾಗತಿಸಿದರು.

## ಮೆರವಣಿಗೆ

ತಾಲೂಕು ಆಡಳಿತದಿಂದ ಆರಂಭವಾದ ಮೆರವಣಿಗೆ ಕನ್ನಡಾಂಬೆಯ ವೃತ್ತ, ಬಸವೇಶ್ವರ ವೃತ್ತ, ಸ್ವಾಮಿ ವಿವೇಕಾನಂದ ವೃತ್ತ, ತೋಂಟದ ಸಿದ್ದಲಿಂಗ ಶ್ರೀಗಳ ವೃತ್ತದ ಮಾರ್ಗವಾಗಿ, ಟಿಪ್ಪು ಸುಲ್ತಾನ್ ವೃತ್ತ, ಡಾ.ಬಿ.ಆರ್. ಅಂಬೇಡ್ಕರ್ ವೃತ್ತ ಹಾಗೂ ಅಂಬಿಗೇರ ಚೌಡಯ್ಯನವರ ವೃತ್ತದ ಮಾರ್ಗವಾಗಿ ಬಸವ ಮಂಟಪಕ್ಕೆ ರೂಪಕಗಳ ಜೊತೆಗೆ ನಗರದ ಪ್ರಮುಖ ಬೀದಿಗಳಲ್ಲಿ ಸಾಗಿತು.

# ಮನೋಸ್ಥೈರ್ಯ ಬಳಸಿ ಗೆಲುವು ಸಾಧಿಸಿ

■ ಉದಯರಶ್ಮಿ ದಿನಪತ್ರಿಕೆ

'ಜಯ್ ನುಡಿ' (ವ್ಯಕ್ತಿತ್ವ ವಿಕಸನ ಲೇಖನ ಮಾಲೆ)

ಇತ್ತೀಚಿನ ನಮ್ಮ ಧಾವಂತದ ಬದುಕು ಸೂತ್ರ ಹರಿದ ಪಟದಂತೆ ಎತ್ತೆತ್ತಲೋ ಸಾಗುತ್ತಿದೆ. ಅರ್ಥವನ್ನೇ ಕಳೆದುಕೊಳ್ಳುತ್ತಿದೆ. ಬದುಕು ಹಸನಾಗಬೇಕಾದರೆ ನಿರ್ದಿಷ್ಟ ಗುರಿಯೊಂದು ಇರಲೇಬೇಕು. ಆ ಗುರಿ ಸಾಧಿಸಲು ನಿಶ್ಚಿತ ಯೋಜನೆಗಳು ಬೇಕು.. ಬಲವಾದ ಯೋಜನೆಗಳನ್ನು ಹಾಕಿಕೊಂಡು ಮನೋಬಲವೇ ಬೇಸರಿಸಿಕೊಳ್ಳುತ್ತೇವೆ. ಗುರಿ ಎನ್ನುವುದು ದೂರದಲ್ಲಿ ಮಿನುಗುವ ತಾರೆಯಂತೆ ಅದರತ್ತ ಚಿತ್ತಗೊಟ್ಟು ದೃಷ್ಟಿ ಹರಿಸಬೇಕು. ಮನೋಸ್ಥೈರ್ಯದ ಬೆಳಕು ಹೆಚ್ಚಾದಾಗ ಅಸ್ಪಷ್ಟವಾಗಿದ್ದ ದಾರಿ ನಿಖರವಾಗತೊಡುಗುತ್ತದೆ. ರಾತ್ರೋರಾತ್ರಿ





ಇಲ್ಲದಿದ್ದರೆ ಗುರಿಯ ಶಿಖರ ಹತ್ತುವುದು ಅಸಾಧ್ಯದ ಮಾತೇ ಸರಿ. 'ಧೈರ್ಯವಾಗಿ ನೀನು ಒಂದು ಹೆಜ್ಜೆ ಇಟ್ಟರೆ ಯಶಸ್ಸು ಹತ್ತು ಹೆಜ್ಜೆ ಮುಂದೆ ಹಾಕುತ್ತದೆ.' ಎಂಬುದು ಕವಿ ರವೀಂದ್ರನಾಥ ಟ್ಯಾಗೋರ್‌ರ ಅನುಭವದ ಮಾತು. ಇದನ್ನೇ ಸಂಸ್ಕೃತದಲ್ಲಿ "ಧೈರ್ಯಂ ಸರ್ವತ್ರ ಸಾಧನಂ" ಎಂದು ಹೇಳಿದ್ದಾರೆ. ದಿನವೂ ನಿರೀಕ್ಷಿತ ಗುರಿಯ ಎದೆಯ ಕದವ ತಟ್ಟಲೇಬೇಕು. ಬದಲಾದ ಕಾಲದಲ್ಲಿ ಗುರಿಯೊಂದಿಗೆ ಬೆಸೆಯಲು ಮಹತ್ವದ ಹೊಸ ಸೃಜನಶೀಲತೆಯ ಹೆಜ್ಜೆ ಹಾಕಲು ಆಗುತ್ತಿಲ್ಲ ಎಂದು ಎಷ್ಟೋ ಸಲ ಗುರಿ ತಲುಪಲು ಸಾಧ್ಯವಿಲ್ಲ. ಕಾಲಾವಕಾಶ ಬೇಕು.ಕಾಲಾನಂತರದಮನೋಸ್ಥೈರ್ಯದ ಕಾಣ್ಕೆಯಿಂದ ಗುರಿಯನ್ನು ಧ್ಯಾನಿಸಿದರೆ ಕಷ್ಟು ಪಟ್ಟು ಪ್ರಯತ್ನಿಸಿದರೆ ಸೋಲಿಗೆ ದಾರಿ ಇಲ್ಲದಂತಾಗುತ್ತದೆ. ದಿಕ್ಸೂಚಿಯಲ್ಲಿ ಮುಳ್ಳು ಸದಾ ಕಾಲ ಉತ್ತರ ದಿಕ್ಕು ತೋರಿಸುವಂತೆ ಮನಸ್ಸು ಸದಾ ಯಶಸ್ಸಿನ ಗುರಿಯತ್ತ ಚಲಿಸುತ್ತಿರಬೇಕು. ಕಠಿಣವೆನಿಸಿದ್ದನ್ನು ಸಲುಭಗೊಳಿಸುವ ಒಂದೇಒಂದು ಮಾರ್ಗೋಪಾಯವೆಂದರೆ ಮನೋಸ್ಥೈರ್ಯ. 'ಅದು ನನ್ನಿಂದ ಸಾಧ್ಯವಿಲ್ಲ.' ನಾನು ಮಾಡಲಾರೆ.' ಎಂದು ಹಿಂಜರಿಯುವ ಮನಸ್ಸಿಗೆ ಅಚಲವಾದ ಶಕ್ತಿಯನ್ನೀಯುವುದೇಮನೋಸ್ಥೈರ್ಯ.. ಗೆಲುವು ಹಲವರ ಪಾಲಾಗಿದೆ. ವಿಜಯದ ಮಾಲೆ ಅವರ ಕೊರಳನ್ನಲಂಕರಿಸುತ್ತದೆ ಎಂದು ನಾವು ಎಷ್ಟೋ ಬಾರಿ ಕರಬುವುದುಂಟು. ಇಂಥ ಸಮಯದಲ್ಲಿ ಮನಸ್ಸನ್ನು ಕದಲದಂತೆ ಕಟ್ಟಿ ಹಾಕಿ ಮನೋಸ್ಥೈರ್ಯದತ್ತ ಹೆಜ್ಜೆ ಹಾಕಿದರೆ ಗೆಲುವು ನಮ್ಮನ್ನು ಹಿಂಬಾಲಿಸುತ್ತದೆ.

'ಹಾರಲು ಬಯಸುವ ವ್ಯಕ್ತಿ ಮೊದಲು ನಿಲ್ಲಲು ನಡೆಯಲು ಹಾಗು ಓಡಲು ಕಲಿಯಬೇಕು.' ಎನ್ನುವ ಫ್ರೆಡಿಕ್ ನೀತ್ಸೆ ಮಾತು ಜಯ ಒಂದೇ ಹಂತದಲ್ಲಿ ಲಭಿಸುವಂಥದ್ದಲ್ಲ ಎಂಬ ಸಂದೇಶವನ್ನು ಸಾರುತ್ತದೆ. ಯಶಸ್ಸಿನತ್ತ ಪಯಣ ಬೆಳೆಸಿದಾಗ ದುರ್ಭರ ಪರಿಸ್ಥಿತಿಯಲ್ಲಿ ಕ್ಷುಲ್ಲಕ ಮನಸ್ಸು ಹಲವು ನೆಪಗಳನ್ನು ಹುಡುಕಿ ಹೇಳುತ್ತದೆ. ಈ ಬಗ್ಗೆ ಕೊಂಚ ಯೋಚಿಸಿದರೂ ಸಾಕು, ಆತ್ಮವಿಮರ್ಶೆ ಮಾಡಿಕೊಂಡರೂ ಸಾಕು, ನಮ್ಮ ಮನಸ್ಸು ಬೇರೆಯವರ ಕಡೆ ಬೊಟ್ಟು ಮಾಡುವುದನ್ನು ಬಿಟ್ಟು ಮನೋಬಲದತ್ತ ಹೊರಳುತ್ತದೆ. ಮುಕ್ತ ಮನಸ್ಸನ್ನು ಹೇಗೆ ಬೇಕಾದರೂ ಬಾಗಿಸಬಹುದು ಎನ್ನುತ್ತಾರೆ ಬಲ್ಲವರು. ಎಲ್ಲವನ್ನೂ ಪರಾಮರ್ಶಿಸಿ ಸ್ವೀಕರಿಸುವ ಇಲ್ಲವೇ ನಿರಾಕರಿಸುವ ಗುಣ ಮುಕ್ತ ಮನಸ್ಸಿಗಿರುತ್ತದೆ. ಇಂಥ ಮನಸ್ಸು ಧೈರ್ಯವನ್ನು ತುಂಬಬಲ್ಲದು.

ಮನೋಸ್ಥೈರ್ಯವಿಲ್ಲದವರು ಜೀವನದಲ್ಲಿ ತಾವೂ ಮುಂದೆ ಬರುವುದಿಲ್ಲ, ಇತರರನ್ನೂ ಮುಂದಕ್ಕೆ ಬರಲು ಬಿಡುವುದಿಲ್ಲ. ಭಯ ಮನಸ್ಸಿನ



ಆಶಕ್ತ ಭಾವ. ಇದು ಸಮಾಜದಲ್ಲೆಡೆ ಹರಡಿರುವ ಪಿಡುಗು. ಈ ಮಾನಸಿಕ ಭಯ ಬದುಕನ್ನೇ ಸರ್ವನಾಶಗೊಳಿಸಬಲ್ಲದು. ಮನೋಸ್ಥೈರ್ಯ ಪ್ರಗತಿ, ಮನಃಶಾಂತಿ, ಆನಂದ ಆರೋಗ್ಯವನ್ನು ಸ್ವಾಗತಿಸುತ್ತದೆ. ಸಾಧಿಸಬೇಕೆಂದಿದ್ದಿರಾ? ಹಾಗಾದರೆ ಮನೋಸ್ಥೈರ್ಯದಿಂದ ಮುಂದುವರೆಯಿರಿ.

ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ
ಉಪನ್ಯಾಸಕರು, ಬೆಳಗಾವಿ, ಮೊ: 9449234142



# ಸಂಭ್ರಮದಿಂದ ದೀಪಾವಳಿ ಆಚರಣೆ :ವ್ಯಾಪಾರದ ಭರಾಟೆ ಜೋರು



■ ಉದಯರಶ್ಮಿ ದಿನಪತ್ರಿಕೆ

■ ವರದಿ: ಬಸವರಾಜ ನಂದಿಹಾಳ

ಬಸವನಬಾಗೇವಾಡಿ: ಪಟ್ಟಣದಲ್ಲಿ ಶುಕ್ರವಾರ ಬೆಳಕಿನ ಹಬ್ಬ ದೀಪಾವಳಿಯ ಅಮವಾಸ್ಯೆಯ ಸಂಭ್ರಮ ಎಲ್ಲೆಡೆ ಕಂಡುಬಂದಿತ್ತು. ಪಟ್ಟಣದ ಐತಿಹಾಸಿಕ ಮೂಲನಂದೀಶ್ವರ (ಬಸವೇಶ್ವರ) ದೇವಸ್ಥಾನ ಸೇರಿದಂತೆ ವಿವಿಧ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ದೇವರಿಗೆ ಅಲಂಕಾರ ಪೂಜೆ ನೆರವೇರಿಸಲಾಗಿತ್ತು. ಎಲ್ಲೆಲ್ಲೂ ವಿಶೇಷ ಪೂಜೆ, ಪುನಸ್ಕಾರಗಳಲ್ಲಿ ಜನರು ನಿರತರಾಗಿದ್ದರು.

ಪಟ್ಟಣದ ಬಸವೇಶ್ವರ ವೃತ್ತದ ಸುತ್ತಲೂ ಸೇರಿದಂತೆ ಮಾರುಕಟ್ಟೆ ಪ್ರದೇಶದಲ್ಲಿ ದೀಪಾವಳಿ ಹಬ್ಬದ ಖರೀದಿಯ ಭರಾಟೆ ಜೋರಾಗಿರುವದು ಕಂಡು ಬಂದಿತ್ತು. ಮಾರುಕಟ್ಟೆಯಲ್ಲಿ ಎಲ್ಲಿ ನೋಡಿದರಲ್ಲಿ ಜನಜಂಗುಳಿಯೋ ಜನಜಂಗುಳಿ. ಬೆಳಗ್ಗೆಯಿಂದಲೇ ಮಾರುಕಟ್ಟೆಗೆ ಲಗ್ಗೆ ಇಟ್ಟ ಜನರು ಪೂಜೆಗೆ ಅಗತ್ಯವಿರುವ ಚೆಂಡು ಹೂ, ಸೇವಂತಿಗೆ, ಬಾಳೆದಿಂಡು, ಕಬ್ಬು, ಸೇಬು, ಬಾಳೆಹಣ್ಣು , ಕಬ್ಬು, ಕುಂಬಳಕಾಯಿ ಸೇರಿದಂತೆ ವಿವಿಧ ಹಣ್ಣು–ಹಂಪಲಗಳನ್ನು ಖರೀದಿಸಿದರು. ಮಾರುಕಟ್ಟೆಯಲ್ಲಿ ಚೆಂಡು ಹೂವು, ಸೇವಂತಿಗೆ ಹೂ ಯಥೇಚ್ಛವಾಗಿ ಮಾರಾಟ ಮಾಡಲಾಗುತ್ತಿತ್ತು. ಕಳೆದ ಸಲದ ದೀಪಾವಳಿಗೆ ಹೋಲಿಸಿದರೆ ಈ ವರ್ಷದ ಹಬ್ಬದಲ್ಲಿ ಈ ಹೂವಿನ ಮಾರಾಟ ದರ ಹೆಚ್ಚಳವಾಗಿರಲಿಲ್ಲ. ಚೆಂಡು ಹೂ ಪ್ರತಿ ಕೆಜಿಗೆ ರೂ. 70–100 ರವರೆಗೆ, ಸೇವಂತಿಗೆ ಹೂ ರೂ.150–200 ರವರೆಗೆ ಮಾರಾಟವಾಯಿತು. ಹೊತ್ತಾಗುತ್ತಿದ್ದಂತೆ ಹೂವಿನ ದರ ಕೊಂಚ ಕಡಿಮೆಯಾಗಿತ್ತು ಕಂಡುಬಂದಿತ್ತು. ವಿವಿಧ ಹಣ್ಣುಗಳ ದರ ಹೆಚ್ಚಳವಿತ್ತು. ಕುಂಬಳಕಾಯಿ ರೂ.50 ರಿಂದ 300 ರವರೆಗೆ, ಬಾಳೆ ಗಿಡ ಪ್ರತಿ ಜೋಡಿಗೆ ರೂ. 30–1000 ರವರೆಗೂ ಮಾರಾಟವಾದವು. ಪಟ್ಟಣದ ಹೊರವಲಯದಲ್ಲಿ ಹಾಕಲಾಗಿದ್ದ ಪಟಾಕಿ ಅಂಗಡಿಗಳಲ್ಲಿ ಪಟಾಕ್ಷಿ ವ್ಯಾಪಾರವೂ ಜೋರಾಗಿತ್ತು.

ದೀಪಾವಳಿ ಹಬ್ಬದಂದು ಲಕ್ಷ್ಮೀ ಪೂಜೆ ಮಾಡುವದರಿಂದ ಮನೆಯಲ್ಲಿ ಲಕ್ಷ್ಮೀ ಶಾಶ್ವತ ನೆಲೆಸುತ್ತಾಳೆ ಎಂಬ ಭಾವನೆ ಇರುವದರಿಂದ ಪೂಜೆಗೆ ಬೇಕಾದ ಸಾಮಗ್ರಿಗಳನ್ನು ಖರೀದಿಸಿ ಕುಟುಂಬ ಬಾಂಧವರೊಂದಿಗೆ ದೀಪಾವಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸುತ್ತೇವೆ ಎಂದು ಪೂಜಾ ಸಾಮಗ್ರಿಗಳನ್ನು ಖರೀದಿಸಲು ಬಂದಿದ್ದ ಜಟ್ಟಿಂಗರಾಯ ಮಾಲಗಾರ ಹೇಳಿದರು.

ಬೆಳಗ್ಗೆಯಿಂದಲೇ ಹಬ್ಬದ ಚಟುವಟಿಕೆಗಳು ಆರಂಭವಾಗಿದ್ದವು. ಮನೆಗೆ ಚೆಂಡು ಹೂ ತರುತ್ತಿದ್ದಂತೆ ಮನೆ ಮಂದಿ ಸೇರಿಕೊಂಡು ಚೆಂಡು ಹೂ ದಾರದಲ್ಲಿ ಪೋಣಿಸಿ ಬಾಗಿಲು ತೋರಣದ ಮೇಲೆ ಕಟ್ಟಿದರು. ಮಹಿಳೆಯರು ಹಬ್ಬದ ಅಡುಗೆ ಮಾಡಿದ ನಂತರ ಕುಟುಂಬದ ಸದಸ್ಯರೆಲ್ಲರೂ ಸೇರಿಕೊಂಡು ಶ್ರದ್ಧಾ ಭಕ್ತಿಯಿಂದ ಲಕ್ಷ್ಮೀ ಪೂಜೆಯಲ್ಲಿ ಭಾಗಿಯಾದರು.

ವಿವಿಧ ವಾಹನಗಳ ಮಾಲೀಕರು, ವ್ಯಾಪಾರಸ್ಥರು ತಮ್ಮ ಅಂಗಡಿಗಳಲ್ಲಿ ಲಕ್ಷ್ಮೀ ಪೂಜೆಯನ್ನು ಶ್ರದ್ಧೆಯಿಂದ ಆಚರಿಸಿದರು. ಪೂಜೆಯಾದ ನಂತರ ಮಕ್ಕಳು ಸೇರಿದಂತೆ ಎಲ್ಲರೂ ಪಟಾಕಿ ಸಿಡಿಸಿ ಸಂಭ್ರಮ ಪಟ್ಟರು. ಕೆಲವರು ದೀಪವಾಳಿ ಅಮವಾಸ್ಯೆ ದಿನದಂದು ಇಡೀ ರಾತ್ರಿ ಜಾಗರಣೆ ಮಾಡಿ ಲಕ್ಷ್ಮೀ ದೇವಿಯ ಮುಂದಿನ ದೀಪ ನಂದದಂತೆ ನೋಡಿಕೊಂಡರು. ಪ್ರತಿ ಮನೆ, ಅಂಗಡಿ–ಮುಂಗಟ್ಟುಗಳ ಮುಂದೆ ಹಣತೆ, ರಂಗೋಲಿ, ಆಕಾಶ ಬುಟ್ಟಿ, ರಂಗು ರಂಗಿನ ವಿದ್ಯುದೀಪಗಳ ಅಲಂಕಾರ ರಾರಾಜಿಸುತ್ತಿತ್ತು.

ಪಟ್ಟಣ ಸೇರಿದಂತೆ ಕೆಲವೆಡೆ ಮಾತ್ರ ಶುಕ್ರವಾರ ದೀಪಾವಳಿ ಅಮವಾಸ್ಯೆ ಆಚರಣೆ ಮಾಡಿದರು. ಉಳಿದಂತೆ ಕೆಲಗ್ರಾಮಗಳಲ್ಲಿ ಗುರುವಾರವೇ ದೀಪಾವಳಿ ಅಮವಾಸ್ಯೆ ಆಚರಣೆ ಜನರು ಮಾಡಿದರು. ಶನಿವಾರ ದೀಪಾವಳಿ ಪಾಡ್ಯ ಹಬ್ಬವನ್ನು ಎಲ್ಲೆಡೆ ಸಂಭ್ರಮದಿಂದಆಚರಿಸಲುಜನರುಸಿದ್ಧತೆಯಲ್ಲಿದ್ದಾರೆ. ದೀಪಾವಳಿ ಪಾಡ್ಯದಂದು ಗುಳವ್ವರ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಪೂಜೆ ನೆರವೇರುವುದು ಸಂಪ್ರದಾಯ.

ಪಟ್ಟಣದ ಹೃದಯ ಭಾಗದಲ್ಲಿ ಮಾರುಕಟ್ಟೆಗೆ ಹೆಚ್ಚಿನ ಜನರು ಆಗಮಿಸಿದ್ದರಿಂದ ವಾಹನಗಳ ಸಂಚಾರಕ್ಕೆ ತೊಂದರೆ ಉಂಟಾದಂತೆ ಪೊಲೀಸ್ ಸಿಬ್ಬಂದಿಗಳು ಕಾರ್ಯನಿರ್ವಹಿಸುವದು ಕಂಡುಬಂದಿತ್ತು. ಪ್ರತಿ ವರ್ಷದ ದೀಪಾವಳಿಯ ಹಬ್ಬದಲ್ಲಿ ಆಗುತ್ತಿದ್ದಂತೆ ವಿಪರೀತ ಜನಸಂದಣಿ ಆಗದಂತೆ ವ್ಯಾಪಾರ ವಹಿವಾಟು ನಡೆಯಿತು. ಪೊಲೀಸ್ ಸಿಬ್ಬಂದಿಗಳು ವಾಹನ ಸಂಚಾರ ಸುಗಮವಾಗುವಂತೆ ಮಾಡಲು ರಸ್ತೆ ಬದಿಯಲ್ಲಿ ಮಾರಾಟ ಮಾಡುವ ವ್ಯಾಪಾರಸ್ಥರನ್ನು ರಸ್ತೆ ಬದಿಯಿಂದ ಹಿಂದಕ್ಕೆ ಸರಿಸುವುದು ಕಂಡುಬಂದಿತ್ತು.

## ಸಿಂದಗಿ ಸೌಂದರ್ಯೀಕರಣಕ್ಕೆ ಪ್ರಾಮಾಣಿಕ ಪ್ರಯತ್ನ :ಮನಗೂಳಿ



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ನಗರವನ್ನು ಸೌಂದರ್ಯೀಕರಣಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಿರುವೆ. ಅಭಿವೃದ್ಧಿಯೇ ನನ್ನ ಮೂಲ ಮಂತ್ರ ಎಂದು ಶಾಸಕ ಅಶೋಕ್ ಮನಗೂಳಿ ಹೇಳಿದರು.

ಪಟ್ಟಣದ ಬೀದಿ ದ್ವೀಪಗಳನ್ನು ಶಾಸಕ ಅಶೋಕ ಮನಗೂಳಿ ಚಾಲನೆ ಮಾತನಾಡಿದ ಅವರು, ಅಲಂಕಾರಿಕ ವಿದ್ಯುತ್ ದ್ವೀಪ ಕಂಬಗಳ ಕಾಮಾಗಾರಿ ಕಳೆದ 24ದಿನಗಳ ಹಿಂದೆಯೇ ಬಸವೇಶ್ವರ ವೃತ್ತದಲ್ಲಿ 5ಕೋಟಿ ರೂ.ವೆಚ್ಚದ ಭೂಮಿ ಪೂಜೆ ನೆರವೇರಿಸಲಾಗಿತ್ತು. ಇಂದು ಬೆಳಕಿನ ಹಬ್ಬ ದೀಪಾವಳಿಯಂದು ಅದಕ್ಕೆ ಚಾಲನೆ ನೀಡಲಾಗಿದೆ. ವೇಗದಿಂದ ಸಾಗುತ್ತಿರುವ ಕಾಮಗಾರಿಗೆ ಸಿಂದಗಿ ಸಾರ್ವಜನಿಕರು ಅಭಿನಂದನೆ ಸಲ್ಲಿಸುವುದಲ್ಲದೇ ಹರ್ಷ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಈ ವೇಳೆ ಪುರಸಭೆ ಮುಖ್ಯಾಧಿಕಾರಿ ರಾಜಶೇಖರ, ಪುರಸಭೆ ಅಧ್ಯಕ್ಷ ಶಾಂತವೀರ ಬಿರಾದಾರ, ಸದಸ್ಯರಾದ ಸಂದೀಪ ಚೌರ, ಹಾಸೀಂ ಆಳಂದ, ಪುರಸಭೆ ಸಿಬ್ಬಂದಿ ನಬಿರಸೂಲ್ ಉಸ್ತಾದ್, ಅಜರ್ ನಾಟಿಕಾರ್, ಕುಮಾರ ದೇಸಾಯಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಚಿಕ್ಕಪಡಸಲಗಿ ಹರಳಯ್ಯ ಶಾಲೆಯಲ್ಲಿ ಕನ್ನಡ ಕಂಪು । ರಾಜ್ಯೋತ್ಸವ ವೈಭವ । ಮಕ್ಕಳ ಹರ್ಷೋಲ್ಲಾಸ ಸಂಭ್ರಮ

# ಕನ್ನಡ ಪ್ರೇಮ ಮೊಳಗಲಿ, ಸುಗಂಧಿತ ಭಾಷೆ ಮಿನುಗಲಿ :ಕವಿತಾ

■ ಉದಯರಶ್ಮಿ ದಿನಪತ್ರಿಕೆ

ಚಿಕ್ಕಪಡಸಲಗಿ: ಕನ್ನಡ ಭಾಷೆ ಉತ್ಕಟ,ಸುಗಂಧ ಭರಿತ ಭಾಷೆ. ಅದು ಕರುನಾಡಿನ ಹೃದಯ ಶ್ರೀಮಂತಿಕೆಯುಳ್ಳ ಮಾತೃಭಾಷೆ. ಎಲ್ಲರ ಮನಸ್ಸು ಸುಲಲಿತವಾಗಿ ಸೆಳೆಯುವ ಕನ್ನಡ ಪ್ರೀತಿಯ ಭಾಷೆ ಬಗೆಗೆ ಕಿಂಚಿತ್ತೂ ಉದಾಸೀನ ಮನೋಭಾವ ಯಾರಲ್ಲೂ ಬೇಡ ಎಂದು ಸಮಾಜ ವಿಜ್ಞಾನ ಶಿಕ್ಷಕಿ ಕವಿತಾ ಅಂಬಿ ನುಡಿದರು. ಇಲ್ಲಿನ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆಯಲ್ಲಿ ಶುಕ್ರವಾರ 69 ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನ್ನಡ ಭಾಷೆ ಬಗ್ಗೆ ಪ್ರತಿಯೊಬ್ಬರೂ ಪ್ರೇಮಭಾವ ಹೊಂದಿದಾಗ ಮಾತ್ರ ಕನ್ನಡದ ಪ್ರಗತಿ ಕಾಣಲು ಸಾಧ್ಯ ಎಂದರು. ವಿಶ್ರಾಂತ ದೈಹಿಕ ಶಿಕ್ಷಣ ಶಿಕ್ಷಕ ಬಸವರಾಜ ಅನಂತಪೂರ ಮಾತನಾಡಿ, ಕನ್ನಡ ನುಡಿಗೆ ನವತನದ ಸೊಗಸಿದೆ. ಕನ್ನಡ ನಮ್ಮ ಸಂಸ್ಕೃತಿಯ ಪ್ರತಿಬಿಂಬವಾಗಿದೆ. ಕನ್ನಡ ನಾಡಿನ ಸ್ಥಾಪನೆಗೆ ಹಲವರು ಶ್ರಮಿಸಿದ್ದಾರೆ.



ಅವರೆಲ್ಲರನ್ನು ಇಂದು ಗೌರವದಿಂದ ಸ್ಮರಿಸುವುದು ನಮ್ಮ ಕರ್ತವ್ಯವಾಗಿದೆ ಎಂದರು.

ಮುಖ್ಯ ಶಿಕ್ಷಕ ಬಸವರಾಜ ಜಾಲೋಜಿ ಮಾತನಾಡಿ, ವಿಜ್ಞಾನ, ತಂತ್ರಜ್ಞಾನದ ಜೊತೆಗೆ ಕನ್ನಡ ಅಭಿಮಾನ ಹೊಂದಬೇಕು. ಕನ್ನಡ ನಮ್ಮ ಬದುಕಿನ ಭಾಷೆ. ಕನ್ನಡ ಹೆಚ್ಚು ಬಳಕೆವಾಗಬೇಕು. ಕನ್ನಡ ಬಳಸಿ ಉಳಿಸಬೇಕಾಗಿದೆ.ಕನ್ನಡದ ಅಸ್ಮಿತೆ ಇನ್ನಷ್ಟು ಗಟ್ಟಿಯಾಗಿ ಕಟ್ಟುವಂತಹ ಕೆಲಸ ಕನ್ನಡ ಮನಗಳಿಂದಲೇ ಆಗಬೇಕು ಎಂದು ಕರೆ ನೀಡಿದರು. ತಾಯಿ ಭುವನೇಶ್ವರಿ, ಲಿಂ, ತೋಂಟದ ಡಾ, ಸಿದ್ದಲಿಂಗ ಶ್ರೀಗಳ ಭಾವಚಿತ್ರಕ್ಕೆ ಪೂಜ್ಯ ಸಲ್ಲಿಸಿ ಗೌರವಿಸಲಾಯಿತು. ನಾಡಗೀತೆ, ರಾಷ್ಟ್ರಗೀತೆ ಹಾಡಲಾಯಿತು. ವೇದಿಕೆಯಲ್ಲಿ ಪ್ರಭಾರ ಮುಖ್ಯಗುರು ಬಸವರಾಜ ಜಾಲೋಜಿ, ಹಿರಿಯ ಮಾರ್ಗದಶಿ9 ಬಸವರಾಜ ಅನಂತಪೂರ, ಶಿಕ್ಷಕ ಲೋಹಿತ ಮಿಜಿ9, ಈರಪ್ಪ ದೇಸಾಯಿ, ಶ್ರೀಶೈಲ ಹುಣಶಿಕಟ್ಟಿ, ಶಿಕ್ಷಕಿಯರಾದ ಸಹನಾ ಕಲ್ಯಾಣಿ(ಹತ್ತಳ್ಳಿ), ಕವಿತಾ ಅಂಬಿ ಮೊದಲಾದವರಿದ್ದರು. ಕುಮಾರಿ ಕೀತಿ9 ಕಲ್ಯಾಣಿ ಸುಂದರವಾಗಿ ಕಾರ್ಯಕ್ರಮ ನಿರೂಪಿಸಿದರು. ಭಾಗ್ಯಾ ಪಾಟೀಲ ವಂದಿಸಿದರು.

### ಸಾಂಸ್ಕೃತಿಕ ಕಾರ್ಯಕ್ರಮಗಳು

ರಾಜ್ಯೋತ್ಸವ ಅಂಗವಾಗಿ ಕನ್ನಡದ ಶ್ರೇಷ್ಠತೆ ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮಕ್ಕಳು ನಡೆಸಿಕೊಟ್ಟರು. ಕನ್ನಡ ಕುರಿತಾದ ಗೀತ ಗಾಯನಕ್ಕೆ ಶಾಲಾ ವಿದ್ಯಾರ್ಥಿನಿಯರು ಪ್ರದಶಿ9ಸಿದ ನೃತ್ಯಗಳು ಜನಮನ ಸೂರೆಗೊಂಡವು. ಕನ್ನಡ ಕಂಪನ್ನು ಸೂಸಿದ ಗೀತ ರಾಗದ ಕುಣಿತಕ್ಕೆ ಜನಮನ ಪುಳಕಿತಗೊಂಡವು. ಕುಮಾರಿ ಸ್ನೇಹಾ ಸಿದ್ದಾಪುರ ಭರತ ನಾಟ್ಯ ಪ್ರದಶಿ9ಸಿದರೆ ಸ್ವಾತಿ ಯಲಗುದ್ರಿ,ಕಾವೇರಿ ಹಾದಿಮನಿ ಕನ್ನಡ ಹಾಡುಗಳಿಗೆ ಕುಣಿದು ಕುಪ್ಪಳಿಸಿದರು. ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

"ಕನ್ನಡ ಹೃದಯ ಹಂದರದ ಸೊಗಸಾದ ಭಾಷೆ. ಕನ್ನಡ ಭಾಷೆಯ ಸೊಗಡು ಅತ್ಯಂತ ಮೊನಚಾಗಿದೆ. ಅದು ಮನಸಿಗೆ ಹಿತಾನುಭವದ ರಸಸ್ವಾದ ನೀಡುತ್ತದೆ. ಕನ್ನಡ ಮಾತನಾಡುವುದೆಂದರೆ ಸಿಹಿ ಸಿಂಚನದ ಸಂಗಮದಲ್ಲಿ ತೇಲಿದಂತೆ. ಕನ್ನಡ ನಾಡಿನ ನುಡಿ ಪ್ರಭಾವತೆ ಹೊಂದಿದೆ. ಇದು ಯಾವದೇ ಮತಪಂಥದ ಭಾಷೆಯಲ್ಲ. ಎಲ್ಲರ ಮೆಚ್ಚಿನ ಭಾಷೆಯಾಗಿದೆ. ಈ ನೆಲದ ಮಣ್ಣಿನ ಕನ್ನಡ ಭಾಷೆ ಶ್ರೀಗಂಧದ ಭಾಷೆಯಾಗಿದೆ. ಸಂಸ್ಕೃತಿಯ ಸಂಸ್ಕಾರ ಹೊಂದಿದೆ. ಈ ಕನ್ನಡ ಭಾಷೆಗೆ ಧಕ್ಕೆ ಬಾರದಂತೆ ನೋಡಿಕೊಳ್ಳಲು ಸಂಕಲ್ಪ ಗೈಯಬೇಕಾಗಿದೆ. ಕನ್ನಡ ಮನಸ್ಸು ಸಾಮರಸ್ಯದ ಆಶಯಹೊಂದಿ ಕನ್ನಡದ ಒಳಿತನ್ನು ಸದಾಕಾಲವೂ ಬಯಸಬೇಕು."

■ - ಗುಲಾಬಚಂದ ಜಾಧವ
ಶಿಕ್ಷಕರು

ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ ಖಾದಿ ಉತ್ಸವ-2024ಕ್ಕೆ ಚಾಲನೆ

# ಖಾದಿ ನಮ್ಮ ದೇಶದ ಅಸ್ಮಿತೆ :ಸಚಿವ ಎಂ.ಬಿ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಖಾದಿ ದೇಶದ ಅಸ್ಮಿತೆಯಾಗಿದ್ದು, ಇದನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಖಾದಿ ಬಳಕೆಯೊಂದಿಗೆ ಉತ್ತೇಜನ–ಪ್ರೋತ್ಸಾಹ ಅತ್ಯಗತ್ಯವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರು ಮತ್ತು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು ಡಾ.ಎಂ.ಬಿ.ಪಾಟೀಲ ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖಾದಿ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನವೆಂಬರ್. 1ರಿಂದ 15ರವರೆಗೆ ನಗರದ ಸ್ಟೇಶನ್ ರಸ್ತೆಯಲ್ಲಿರುವ ಕಂದಗಲ್ ಶ್ರೀ ಹನುಮಂತರಾಯರಂಗಮಂದಿರದ ಆವರಣದಲ್ಲಿ ಆಯೋಜಿಸಿರುವ ರಾಜ್ಯ ಮಟ್ಟದ ಖಾದಿ ಮತ್ತು ಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದ ಖಾದಿ ಉತ್ಸವ–2024ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ದೇಶದ ಸ್ವಾತಂತ್ರ್ಯ ಚಳುವಳಿಯ ಸಂದರ್ಭದಲ್ಲಿ ಮಹಾತ್ಮಗಾಂಧೀಜಿಯವರು ವಿದೇಶಿ ಉತ್ಪನ್ನಗಳಿಗೆ ಕಡಿವಾಣ ಹಾಕಿ ಖಾದಿ ಉತ್ಪನ್ನಗಳನ್ನು ಸ್ವ ನೇಯುವ ಮೂಲಕ ಸ್ವದೇಶಿ ಉತ್ಪನ್ನಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು. ಖಾದಿ ದೇಶದ ಅಸ್ಮಿತೆ, ಸ್ವಾವಲಂಬನೆಯ ಪ್ರತಿಕವಾದ ಖಾದಿ ಉಳಿಸಿ ಬೆಳೆಸುವ ಅವಶ್ಯಕತೆ ಇದೆ ಎಂದು ಹೇಳಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಖಾದಿ ಉದ್ದಿಮೆ ಸಂಕಷ್ಟದಲ್ಲಿದೆ. ಹಲವು ಸಂಘ–ಸಂಸ್ಥೆಗಳು ಖಾದಿ ಪರಿಚಯಿಸಿ, ಬೆಳೆಸುವ ಛಲಹೊಂದಿ ಖಾದಿ ಮಾರುಕಟ್ಟೆ ವಿಸ್ತರಿಸುತ್ತಿದ್ದಾರೆ. ಖಾದಿಗೆ ವಿಶ್ವ ಮಟ್ಟದಲ್ಲಿ ಬ್ರಾಂಡ್ ಸೃಷ್ಟಿ ಮಾಡುವ ಅವಶ್ಯಕತೆ ಇದೆ. ಖಾದಿ ಮಾರುಕಟ್ಟೆ ಹೆಚ್ಚಿಸಿ ಅಂತರರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯಬೇಕು. ಈ ದಿಸೆಯಲ್ಲಿ ಚಿಂತನೆ ಮಾಡಬೇ ಕಾಗಿದೆ. ಈ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿಯೂ ಸಹ ಗಮನ ಸೆಳೆಯಲಾಗುವುದು ಎಂದು ಹೇಳಿದ ಅವರು, 15 ದಿನಗಳ ಆಯೋಜಿಸಿರುವ ಖಾದಿ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಖಾದಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ಉತ್ತೇಜನ ನೀಡಬೇಕು ಎಂದು ಅವರು ಮನವಿ ಮಾಡಿಕೊಂಡರು. ವಿಜಯಪುರ ಜಿಲ್ಲೆ ಒಂದು ಐತಿಹಾಸಿಕ ನಗರವಾಗಿದ್ದು, ಕಳೆದ 10 ವರ್ಷಗಳಿಂದ ಖಾದಿ ಆಯೋಗ, ಖಾದಿ ಮಂಡಳಿಯ ವತಿಯಿಂದ ಜಿಲ್ಲಾ ಮಟ್ಟದ ಹಾಗೂ ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ವಿಜಯಪುರ ಜಿಲ್ಲೆಯಲ್ಲಿ ಖಾದಿ, ರೇಷ್ಮೆ ಹಾಗೂ ಉಣ್ಣೆಯ ವಸ್ತುಗಳಿಗೆ ಹೆಚ್ಚಿನ ಬೇಡಿಕೆ ಪ್ರಯುಕ್ತ ವಿಶೇಷವಾಗಿ ಶುದ್ಧ ರೇಷ್ಮೆ ಸೀರೆಗಳು ಹೆಚ್ಚಿನ ಪ್ರಮಾಣದಲ್ಲಿ ಪ್ರದರ್ಶನ ಹಾಗೂ ಮಾರಾಟದ ವ್ಯವಸ್ಥೆ ಕಲ್ಪಿಸಲಾಗಿದೆ. ಖಾದಿ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ವಿವಿಧ 75 ವಸ್ತು ಪ್ರದರ್ಶನ ಹಾಗೂ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆ ಸೇರಿದಂತೆ ರಾಜ್ಯದ ಹಾಗೂ ಹೊರ ರಾಜ್ಯಗಳಿಂದ ಮಳಿಗೆಗಳನ್ನು ಸ್ಥಾಪಿಸಲಾಗಿದೆ. ವಿಜಯಪುರ, ಬಾಗಲಕೋಟೆ, ಗದಗ, ಬೆಳಗಾವಿ, ಧಾರವಾಡ, ದಾವಣಗೆರೆ, ಚಿತ್ರದುರ್ಗ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು, ಬಳ್ಳಾರಿ, ಕೊಪ್ಪಳ, ಬೀದರ, ಮಂಡ್ಯ ಮೈಸೂರು. ಹಾಗೂ ಹೊರ ರಾಜ್ಯಗಳಿಂದ ವಸ್ತು ಪ್ರದರ್ಶನದಲ್ಲಿ ಅರಳೆ ಖಾದಿ, ಉಣ್ಣೆ ಖಾದಿ, ಪಾಲಿವಸ್ತ್ರ, ಶುದ್ಧ ಖಾದಿ ರೇಷ್ಮೆ ಸೀರೆಗಳು, ಕಸೂತಿ ಸೀರೆಗಳು, ಜಾಕೇಟ್, ಕರದಂಟು, ಸಿಹಿ ತಿಂಡಿಗಳು, ಡಿಜೈನ್ ಬ್ಯಾಗಗಳು, ಬಿದಿರು ಬೆತ್ತ, ರೆಡಿಮೇಡ್ ಶರ್ಟ್‌ಗಳು ಪಾದರಕ್ಷೆಗಳು ಪಿಠೋಪಕರಣಗಳ ಪ್ರದರ್ಶನ ಹಾಗೂ ಮಾರಾಟ ಮತ್ತು ಜಿಲ್ಲಾ ಪಂಚಾಯಿತಿ ವತಿಯಿಂದ ಸ್ವ ಸಹಾಯ ಗುಂಪಿನವರು ತಯಾರಿಸಿದ ಆಹಾರ ಹಾಗೂ ಕರಕುಶಲ ವಸ್ತುಗಳು ಪ್ರದರ್ಶನ ಏರ್ಪಡಿಸಲಾ ಗಿದೆ. ಪ್ರತಿ ವರ್ಷದಂತೆ ಈ ವರ್ಷವು ಕೂಡಾ ಹೆಚ್ಚಿನ ಮಾರಾಟವನ್ನು ನಿರೀಕ್ಷಿಸಲಾಗಿದೆ ಎಂದು ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ತಿಳಿಸಿದರು.



ಈ ಕಾರ್ಯಕ್ರಮದಲ್ಲಿ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮೇಯರ್ ಮಹೇಜಬಿನ್ ಹೊರ್ತಿ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನಾನ್ ಮುಶ್ರೀಫ್,ಉಪ ಮೇಯರ್ ದಿನೇಶ ಹಳ್ಳಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿ.ಟಿ ವೆಂಕಟೇಶ ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಕೆಕೆಜಿಎಸ್ ಅಧ್ಯಕ್ಷರಾದ ಬಿ.ಬಿ.ಪಾಟೀಲ (ಶೇಗುಣಸಿ) ಜಿಲ್ಲಾ ಖಾದಿ ಗ್ರಾಮೊದ್ಯೋಗ ಅಧಿಕಾರಿಗಳಾದ ನಾರಾಯಣ ಕಾಂಬಳೆ, ಅಭಿವೃದ್ಧಿ ಅಧಿಕಾರಿಗಳು ಜಿಲ್ಲಾ ಖಾದಿ ಗ್ರಾಮೋದ್ಯೋಗ ಕಚೇರಿ ಬೆಳಗಾವಿಯ ಸಾವಿತ್ರಮ್ಮ ದಳವಾಯಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಕರ್ನಾಟಕದ ವೀರವನಿತೆ ಬೆಳವಡಿ ಮಲ್ಲಮ್ಮ

■ ಉದಯರಶ್ಮಿ ದಿನಪತ್ರಿಕೆ

ಭಾರತ ಸ್ವಾತಂತ್ರ್ಯ ಹೋರಾಟವು ಕೇವಲ ರಾಜಕೀಯ ಹೋರಾಟವಾಗಿರಲಿಲ್ಲ. ಅದು ರಕ್ತಸಿಕ್ತ ಅಧ್ಯಾಯವೂ ಆಗಿತ್ತು. ತ್ಯಾಗ ಬಲಿದಾನಗಳ ಚಳುವಳಿಯೂ ಆಗಿತ್ತು. ಅದು ಪುರುಷಮತ್ತು ಮಹಿಳೆ ಎಂಬ ತಾರತಮ್ಯಗಳಿಲ್ಲದ ಒಂದು ಸಮಗ್ರ ಹೋರಾಟವಾಗಿತ್ತು. ಬೆಳವಡಿ ಮಲ್ಲಮ್ಮ ಕರ್ನಾಟಕದ ಬೆಳಗಾವಿ ಜಿಲ್ಲೆಯ ವೀರರಾಣಿ. ಮರಾಠರ ವಿರುದ್ಧ ಹೋರಾಡಲು ಮಹಿಳಾ ಸೇನೆಯನ್ನು ಸಂಘಟಿಸಿದ ಮೊದಲ ಮಹಿಳೆ. ವಿಶ್ವದಲ್ಲಿ ಪ್ರಥಮ ಮಹಿಳಾ ಸೈನ್ಯ ಕಟ್ಟಿದ್ದು ವೀರ ರಾಣಿ ಮಲ್ಲಮ್ಮ. ಕನ್ನಡ ನಾಡಿನ ಅತ್ಯಮೂಲ್ಯ ಅನರ್ಘ್ಯ ರತ್ನವಾದ ವೀರರಾಣಿ ಮಲ್ಲಮ್ಮ ಬ್ರಿಟಿಷರ ವಿರುದ್ಧ ಹೋರಾಡಿದ ಕನ್ನಡ ನಾಡಿನ ವೀರ ವನಿತೆಯರಲ್ಲಿ ಒಬ್ಬಳು. ಸ್ವಾತಂತ್ರ ಹೋರಾಟದಲ್ಲಿ ಮುಖ್ಯವಾಗಿ ಹೆಸರಿಸಲಾದ ಹೆಸರುಗಳಲ್ಲಿ ಮೊದಲನೇ ಹೆಸರು ಬೆಳವಡಿ ಮಲ್ಲಮ್ಮ,

ಸೋಂದೆಯ ಯುವರಾಣಿ ಒಂದು ತಿಂಗಳಿನಲ್ಲಿ 21 ಹುಲಿಗಳನ್ನು ಹೊಡೆದು ಹಾಕಿದ ಬೆಳವಡಿಯ ರಾಜ ಈಶಪ್ರಭುವಿನ ಮಡದಿ ರಾಣಿ ಮಲ್ಲಮ್ಮಳ ಕುರಿತ ಸಾಹಸ ಪರಾಕ್ರಮಗಳ ರೋಚಕ ಕಥೆ ಮೈನವಿರೇಳಿಸುತ್ತದೆ. ರಾಣಿ ಮಲ್ಲಮ್ಮಳನ್ನು ಕಂಡರೆ ರಜಪೂತ ಯೋಧರು, ಬ್ರಿಟಿಷರು ಮಾತ್ರವಲ್ಲ ಶಿವಾಜಿ ಮಹಾರಾಜರ ಸೈನ್ಯವೂ ಮತ್ತು ಮೊಘಲ್ ಸಾಮ್ರಾಜ್ಯವೂ ಹೆದರುತ್ತಿತ್ತು. ಎಂಟೆದೆಯ ಗುಂಡಿಗೆಯ ಗಂಡು ಕೂಡಾ ಮಲ್ಲಮ್ಮಳ ಮುಂದೆ ನಿರ್ವೀರ್ಯನಾಗುತ್ತಿದ್ದ. ರಾಣಿಯ ಸ್ವಾಭಿಮಾನ ಮತ್ತು ಪರಾಕ್ರಮವನ್ನು ನೋಡಿ ಚತ್ರಪತಿ ಶಿವಾಜಿ ಮಹಾರಾಜರು ತಮ್ಮ ಸೈನ್ಯದಿಂದಾದ ಅನ್ಯಾಯಕ್ಕೆ ಕ್ಷಮೆ ಕೋರಿ ರಾಣಿ ಮಲ್ಲಮ್ಮಳನ್ನು ಸೋದರಿ ಎಂದು ಅಭಿಮಾನದಿಂದ ಕರೆಯುತ್ತಿದ್ದರು ಮತ್ತು ಇದರಿಂದ ಕನ್ನಡಿಗರು ಮತ್ತು ಮರಾಠಿಗರ ನಡುವೆ ಬಾಂದವ್ಯದ ಬೆಸುಗೆ ಬೆಸೆದ ಕೀರ್ತಿ ರಾಣಿ ಮಲ್ಲಮ್ಮಳಿಗೆ ಸಲ್ಲುತ್ತದೆ. ಮಲ್ಲಮ್ಮನ ರೋಚಕ ಕಥೆಯನ್ನು ಒಳಗೊಂಡ ಹಾಗೂ ಬ್ರಿಟಿಷರನ್ನು ತಬ್ಬಿಬ್ಬುಗೊಳಿಸಿ ಅವರ ವ್ಯಾಪಾರಕ್ಕೆ ನಿಷೇಧ ಹೇಳಬೇಕೆನ್ನುವ ರಾಣಿಯ ವಾದದ ಕಥೆ ಕೇಳಿದರೆ ಕನ್ನಡಿಗರು ಹೆಮ್ಮೆಯಿಂದ ಬೀಗುತ್ತಾರೆ.

16 ವರ್ಷಕ್ಕೆ ಮದುವೆ , 18 ವರ್ಷಕ್ಕೆ ವೈಧವ್ಯ, 19 ವರ್ಷಕ್ಕೆ ಮಹಾರಾಣಿಯಾಗಿ 20 ವರ್ಷಗಳ ರಾಜ್ಯಾ ಧಿಕಾರ, ಸುಧೀರ್ಘ ಸೇವೆಯ ಜನಪರ ಆಡಳಿತ ಮತ್ತು ಲೋಕ ಹಿತ ಕಾರ್ಯಗಳು ಮಲ್ಲಮ್ಮಳನ್ನು ಇವತ್ತಿಗೂ ಜೀವಂತವಾಗಿಟ್ಟಿವೆ.


350 ವರ್ಷಗಳ ಹಿಂದೆಯೇ ಬೆಳವಡಿಯ ರಾಣಿ ಮಲ್ಲಮ್ಮ ಬ್ರಿಟಿಷರನ್ನು ಭಾರತದ ಒಳಗೆ



ಬಿಟ್ಟುಕೊಳ್ಳಬಾರದು ಎಂಬ ಕಹಳೆಯನ್ನು ಮೊಳಗಿಸಿದ್ದು ಇಂದು ಇತಿಹಾಸದಲ್ಲಿ ಅಚ್ಚಳಿಯದೆ ಉಳಿದಿದೆ. ಆಗಸ್ಟ್ 18 ಬೆಳವಡಿಯ ವೀರ ರಾಣಿ ಮಲ್ಲಮ್ಮಳ ಜನ್ಮದಿನ. ಕನ್ನಡ ನಾಡಿಗೆ ಸೌಭಾಗ್ಯ ತಂದುಕೊಟ್ಟವಳು ಮತ್ತು ಕನ್ನಡ ನಾಡಿನ ಹೆಮ್ಮೆ ಸಂಸ್ಕೃತಿ ಪರಂಪರೆಯನ್ನು ಶಾಶ್ವತವಾಗಿ ಉಳಿಯುವಂತೆ ಮಾಡಿದ ಮಲ್ಲಮ್ಮಳ ಶೌರ್ಯ ಪರಾಕ್ರಮಗಳಿಗೆ ಛತ್ರಪತಿ ಶಿವಾಜಿ ಮಹಾರಾಜರು ಕೂಡ ಸೋತಿದ್ದರು ಎಂಬುದು ನಮ್ಮೆಲ್ಲರಿಗೆ ಹೆಮ್ಮೆಯ ಸಂಗತಿ. ರಾಣಿ ಮಲ್ಲಮ್ಮ ಇತಿಹಾಸದಲ್ಲಿ ಬಂಗಾರದ ಪುಟದಲ್ಲಿ ರಾರಾಜಿಸುವವಳು. ಕನ್ನಡ ನಾಡಿನ ಮನೆಮನೆಗಳಲ್ಲಿ ಮನಸುಗಳಲ್ಲಿ ಕೆಚ್ಚೆದೆಯ ಹೃದಯಗಳಲ್ಲಿ ಅಜರಾಮರವಾಗಿ ಉಳಿಯುವವಳು.

ನಮ್ಮ ಕನ್ನಡ ನಾಡಿನಲ್ಲಿ ಜನಿಸಿ ನಾಡಿನ ಕೀರ್ತಿಪತಾಕೆಯನ್ನು ದೇಶಾದ್ಯಂತ ಪಸರಿಸಿದ ವೀರಮಾತೆಯರಲ್ಲಿ ಬೆಳವಡಿ ಮಲ್ಲಮ್ಮ ಸಹ ಒಬ್ಬ ಪ್ರಮುಖರು. ಇವರು ಸೋಂದೆಯ ಮಹಾರಾಜ ಮಧುಲಿಂಗನಾಯಕರ ಸುಪುತ್ರಿ. ಐದನೆಯ ವಯಸ್ಸಿನಲ್ಲಿ ಮಲ್ಲಮ್ಮನಿಗೆ ವಯಸ್ಸಿಗೆ ಮೀರಿದ ಧೈರ್ಯ, ಕ್ಷಾತ್ರ ತೇಜಸ್ಸು, ಮುಖದಲ್ಲಿ ರಾರಾಜಿಸುತ್ತಿತ್ತು. ತಮ್ಮ ಊರಿನ ಜನರ ಮೇಲೆ ಮಲ್ಲಮ್ಮ ಬಹಳ ವಾತ್ಸಲ್ಯ ಇಟ್ಟುಕೊಂಡಿದ್ದರು. ಆ ಚಿಕ್ಕ ವಯಸ್ಸಿನಲ್ಲಿಯೇ ಎಲ್ಲ ನಾಯಕತ್ವದ ಗುಣಗಳನ್ನೂ ಸಹ ಬೆಳೆಸಿಕೊಂಡಿದ್ದರು. ಇಂತಹ ಸಂಗತಿಗಳನ್ನು ತಿಳಿದ ತಂದೆ ಮದುಲಿಂಗ ನಾಯಕರು

ಲೇಖನ
ಸುಧಾ ಪಾಟೀಲ (ಬೆಳಗಾವಿ)
ವಿಶ್ವಸ್ಥರು, ಬಸವ ತಿಳುವಳಿಕೆ ಮತ್ತು ಅಧ್ಯಯನ ಕೇಂದ್ರ, ಪುಣೆ




## ಅಪ್ರತಿಮ ಮಹಿಳೆ'

ಮಲ್ಲಮ್ಮ ಮತ್ತು ಸಹೋದರ ಸದಾಶಿವ ನಾಯಕನನ್ನು ಹೆಚ್ಚಿನ ಕಲಿಕೆಗಾಗಿ ಗುರುಕುಲಕ್ಕೆ ಕಳಿಸಿದರು. ಮಲ್ಲಮ್ಮ ಸಂಸ್ಕೃತ ಕನ್ನಡ, ಉರ್ದು, ಮರಾಠಿ ಭಾಷೆಗಳು ಸುಲಲಿತವಾಗಿ ಓದಲು ಬರೆಯಲು ಮಾತನಾಡಲು ಕಲಿತಿದ್ದರು. ಸಹೋದರ ಸದಾಶಿವ ನಾಯಕ ವಿದ್ವಾಂಸರಾಗಿ ಹೊರಬಂದರು.

ಮಲ್ಲಮ್ಮನಿಗೆ ಸಾಹಿತ್ಯಾಸಕ್ತಿಯು ಅತಿಯಾಗಿತ್ತು. ರಾಜ್ಯದ ಪ್ರಮುಖ ವಿದ್ವಾಂಸರಿಂದ ಸಾಹಿತ್ಯದ ಬಗೆಗಿನ ಉನ್ನತ ಜ್ಞಾನವನ್ನು ಪಡೆದು ಎಲ್ಲ ವಿಭಾಗಗಳಲ್ಲೂ ಪರಿಣಿತಿ ಪಡೆದರು. ಮಲ್ಲಮ್ಮ ಹದಿನಾರು ವರ್ಷದಲ್ಲಿದ್ದಾಗ ಬೆಳಗಾವಿಯ ಬೈಲಹೊಂಗಲದ ಈಶಪ್ರಭು ಮಹಾರಾಜರ ಜೊತೆ ಪಾಣಿ ಗ್ರಹಣವಾಯಿತು. ಮಹಾರಾಜ ಈಶಪ್ರಭುವೂ ಅಪ್ರತಿಮ ಪರಾಕ್ರಮಿಯಾಗಿದ್ದರು. ಇವರಿಗೆ ನಂತರದ ದಿನಗಳಲ್ಲಿ ಒಂದು ಗಂಡು ಮಗು ಜನಿಸಿತು. ಆ ಮಗುವಿಗೆ ನಾಗಭೂಷಣ ಎಂದು ನಾಮಕರಣ ಮಾಡಲಾಯಿತು.

ಎಲ್ಲ ರಾಣಿಯರು ಕೇವಲ ರಾಜ ಭವನದಲ್ಲಿ ಮಾತ್ರ ಇರುತ್ತಾರೆ. ಆದರೆ ಮಲ್ಲಮ್ಮ ಎಲ್ಲರ ಹಾಗೆ ಸುಮ್ಮನೆ ಕುಳಿತುಕೊಂಡಿರುವ ರಾಣಿ ಆಗಿರಲಿಲ್ಲ. ಬೆಳವಡಿಯಲ್ಲಿ 2,000ಕ್ಕೂ ಅಧಿಕ ಮಹಿಳೆಯರ ಸೇನಾ ತಂಡವನ್ನು ಕಟ್ಟಿ ಅದಕ್ಕೆ ಬೇಕಾದ ತರಬೇತಿ ಮತ್ತು ಸಹಕಾರವನ್ನು ನೀಡಿದರು. ಮಲ್ಲಮ್ಮ ಯಾವುದೇ ಸಮಯದಲ್ಲೂ ರಾಜ್ಯಭಾರ ಮಾಡಬೇಕೆನ್ನುವ ಪರಿಸ್ಥಿತಿ ಒದಗಿ ಬಂದರೆ ಎಲ್ಲದಕ್ಕೂ ತಯಾರಾಗಿದ್ದರು. ಮಲ್ಲಮ್ಮ ಯುದ್ಧ ವಿದ್ಯೆಗಳಾದ ಕುಸ್ತಿ ಧನುರ್ವಿದ್ಯೆ, ಕತ್ತಿ ವರಸೆ, ಕುದುರೆ ಸವಾರಿ ಇವುಗಳಲ್ಲಿ ಬಹಳ ಪ್ರವೀಣೆಯಾಗಿದ್ದರು. ಇದರ ಜೊತೆಜೊತೆಗೆ ರಾಜ ನೀತಿ ಮತ್ತು ಅದರ ಸಾಧಕ ಬಾಧಕಗಳನ್ನು ಚೆನ್ನಾಗಿ ಅರಿತಿದ್ದರು.

ನಂತರದ ದಿನಗಳಲ್ಲಿ ರಾಜ್ಯ ವಿಸ್ತರಿಸುವ ಕಾರ್ಯದಲ್ಲಿ ಮರಾಠರ ಚಕ್ರವರ್ತಿ ಶಿವಾಜಿ ಮಹಾರಾಜರು ತೊಡಗಿದ್ದರು. ದಕ್ಷಿಣ ಭಾರತದಿಂದ ಉತ್ತರದ ಕಡೆಗೆ ಪ್ರಾಣ ಬೆಳೆಸುತ್ತಿದ್ದ ಸಮಯವದು. ಆಗ ಅವರ ಸೈನ್ಯ ಬೆಳವಡಿಯ ಪಕ್ಕದಲ್ಲಿ ತಂಗಿತ್ತು. ಮರಾಠರು ರಾಜ್ಯ ವಿಸ್ತಾರದ ಬಯಕೆಯಿಂದ ಬೆಳವಡಿಗೆ ಒತ್ತಡ ಹಾಕಲು ಪ್ರಯತ್ನಿಸಿದರು ಮಲ್ಲಮ್ಮನ ಸ್ವಾಭಿಮಾನ ಇದಕ್ಕೆ ಒಪ್ಪಿಗೆ ನೀಡಲಿಲ್ಲ ಮರಾಠರಿಗೆ ತಲೆಬಾಗದೆ ಯುದ್ಧಕ್ಕಾದರೂ ಸೈ , ಆದರೆ ತಲೆತಗ್ಗಿಸಿ ಮಾತ್ರ ನಿಲ್ಲುವುದಿಲ್ಲ ಎಂದು ತೀರ್ಮಾನಿಸಿದರು. ನಂತರ ಒಂದು ದಿನ ಮರಾಠಾ ಸೈನಿಕರು ಪ್ರಯಾಣದ ದಾಹದಿಂದ ಅಲ್ಲಿಯ ಗೊಲ್ಲರ ಬಳಿ ಸ್ವಲ್ಪ ಹಾಲನ್ನು ನೀಡಲು ಹೇಳಿದರು. ಮರಾಠರು ಬೆಳವಡಿಗೆ ನೀಡುತ್ತಿದ್ದ ಅಲ್ಪಸ್ವಲ್ಪ ತೊಂದರೆಯನ್ನು ತಿಳಿದ ಗೊಲ್ಲರು ಹಾಲು ನೀಡಲು ನಿರಾಕರಿಸಿದರು. ಅದನ್ನು ನೋಡಿ ಮರಾಠರು ಸಿಟ್ಟಿಗೇಳುತ್ತಾರೆ. ನಂತರ ಆ ಪ್ರಕರಣ ದೊಡ್ಡ ಮಟ್ಟಕ್ಕೆ ತಿರುಗಿ ಮಲ್ಲಮ್ಮ ತನ್ನ ಸೈನ್ಯದ ಜೊತೆಗೆ ಮುಂದಾಳತ್ವ ವಹಿಸಿಕೊಂಡು ಹೋರಾಟಕ್ಕೆ ಸಜ್ಜಾಗುತ್ತಾರೆ. ಸುಮಾರು ನೂರಕ್ಕೂ ಅಧಿಕ ಮರಾಠಾ



ಸೈನಿಕರನ್ನು ಸದೆಬಡೆಯುತ್ತಾರೆ ಮರಾಠಾ ಸೈನಿಕರು ಮೋಸದಿಂದ ಮಲ್ಲಮ್ಮನ ಕುದುರೆಯ ಕಾಲು ಕಡಿದು ಬೀಳಿಸುತ್ತಾರೆ ಆಗ ಕೆಳಗಿಳಿದ ಮಲ್ಲಮ್ಮ ಕತ್ತಿ ಗುರಾಣಿಯ ಸಹಾಯದಿಂದ ಹೋರಾಡುತ್ತಾಳೆ ಆದರೆ ವಿಧಿಯಾಟ ಬೇರೆಯೇ ಇದೆ. ಆ ಸೈನಿಕರು ಮಲ್ಲಮ್ಮನನ್ನು ಸೆರೆಹಿಡಿದು ಶಿವಾಜಿ ಮಹಾರಾಜರ ಎದುರು ಕರೆದೊಯ್ದು ನಿಲ್ಲಿಸುತ್ತಾರೆ.

ಪರಾಕ್ರಮಿ ಯೋಧ ಶಿವಾಜಿ ಮಹಾರಾಜರನ್ನು ನೋಡಿದ ಮಲ್ಲಮ್ಮ ಕಿಂಚಿತ್ತೂ ಹೆದರದೆ ಧೈರ್ಯದಿಂದ ತಲೆ ಎತ್ತಿಕೊಂಡು ನಿಂತಿರುತ್ತಾರೆ. ಒಳ್ಳೆಯ ಸಂಸ್ಕಾರವಂತರಾದ ಶಿವಾಜಿ ಮಹಾರಾಜರು ಆ ಪರಿಸ್ಥಿತಿಯನ್ನು ಚೆನ್ನಾಗಿ ಅರ್ಥೈಸಿಕೊಂಡು ನಂತರ ಹೇಳುತ್ತಾರೆ. "ಅಮ್ಮ ನಾವು ಇನ್ನು ಮೇಲೆ ನಿಮಗೆ ಯಾವುದೇ ತೊಂದರೆ ನೀಡುವುದಿಲ್ಲ" ಎಂದು ಹೇಳಿ ಮಲ್ಲಮ್ಮನ ಕಾಲಿಗೆ ಬಿದ್ದು ಆಶೀರ್ವಾದ ಪಡೆದುಕೊಳ್ಳುತ್ತಾರೆ. ನಮ್ಮ ಕನ್ನಡ ನಾಡಿನ ಸ್ತ್ರೀ ಒಬ್ಬಳು ಅಂತಹ ಮಹಾತ್ಮಾ ಛತ್ರಪತಿ ಶಿವಾಜಿ ಮಹಾರಾಜರ ಮನಸ್ಸನ್ನು ಗೆದ್ದು ಮಾತೆ ಎಂದು ಕರೆಸಿಕೊಂಡ ಧೈರ್ಯವಂತೆ ಮಲ್ಲಮ್ಮ. ಶಿವಾಜಿ ಮಹಾರಾಜರ ಸೈನಿಕರಿಂದ ಸಕಲ ಮರ್ಯಾದೆಯೊಂದಿಗೆ ತನ್ನ ರಾಜ್ಯಕ್ಕೆ ಮರಳಿದ ಸ್ವಾಭಿಮಾನಿ ವೀರವನಿತೆ ಬೆಳವಡಿ ಮಲ್ಲಮ್ಮನವರಿಗೆ ಶತಶತ ಪ್ರಣಾಮಗಳು.

**ಲಿಂಬೆ ನಾಡಿನಲ್ಲಿ ರಾರಾಜಿಸಿದ ಕನ್ನಡ ವೈಭವ । ಸಾಂಸ್ಕೃತಿಕ ಕಾರ್ಯಕ್ರಮ । ಸನ್ಮಾನ**

# ಕನ್ನಡ ನಾಡಿಗೆ ಅನೇಕ ಮಹನೀಯರ ಕೊಡುಗೆ ಇದೆ :ಎಸಿ ಗದ್ಯಾಳ




■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಲಿಂಬೆ ನಾಡಿನ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಟ್ಟಣದ ಹೃದಯಭಾಗದ ಪ್ರಮುಖ ಮುಖ್ಯ ರಸ್ತೆಯಲ್ಲಿ ಕನ್ನಡ ಬಾವುಟ ಹಿಡಿದು, ಕರ್ನಾಟಕದ ಕನ್ನಡ ಶಕ್ತಿ ಪ್ರದರ್ಶಿಸಿದರು. ವಿದ್ಯಾರ್ಥಿಗಳಿಂದ ಕನ್ನಡ ನಾಡಿನ ಹಬ್ಬದ ಸಾಂಸ್ಕೃತಿಕ ಕಾರ್ಯಕ್ರಮಗಳು ಬಹಳ ಅದ್ದೂರಿ ಮತ್ತು ವಿಜೃಂಭಣೆಯಿಂದ ಜರುಗಿದವು. ಶುಕ್ರವಾರ ಪಟ್ಟಣದ ಪೋಲಿಸ ಪರೇಡ ಮೈದಾನದಲ್ಲಿ ತಾಲೂಕಾ ಆಡಳಿತದಿಂದ ನಡೆದ ಕರ್ನಾಟಕ ರಾಜ್ಯೋತ್ಸವ ಅದ್ದೂರಿಯಾಗಿ ಜರುಗಿತು. ಇದೆ ಸಂದರ್ಭದಲ್ಲಿ ಕಂದಾಯ ಉಪವಿಭಾಗ ಅಧಿಕಾರಿ ಅಬೀದ್ ಗದ್ಯಾಳ ಮಾತನಾಡಿದ ಅವರು, ಸಾವಿರಾರು ವರ್ಷ ಇತಿಹಾಸವಿರುವ ಕನ್ನಡನಾಡು, ನುಡಿ, ಸಂಸ್ಕೃತಿಗೆ ಅನೇಕ ಮಹನೀಯರ ಕೊಡುಗೆ ಇದೆ. ಕನ್ನಡನಾಡು ಹಚ್ಚ ಹಸುರಿನ ಸುಂದರ ಬೆಟ್ಟಗುಡ್ಡಗಳ ನದಿಗಳು ಹರಿಯುವ ಬೀಡು, ಸಾಧು ಸಂತರು, ದಾಸರು ಶರಣರು, ಕವಿಗಳಿಂದ ಕಂಗೊಳಿಸುತ್ತಿರುವ ಕನ್ನಡ ನಾಡು ಎಂದರು. ಕಸಾಪ ಮಾಜಿ ಅಧ್ಯಕ್ಷ ಡಾ. ಕಾಂತು ಇಂಡಿ ಮಾತನಾಡಿ, ಬೇಲೂರು, ಹಳೆಬೀಡು, ಹಂಪಿ, ಬಾದಾಮಿ, ಐಹೊಳೆ, ಪಟ್ಟದಕಲ್ಲು, ಶ್ರೇಷ್ಠ ವಾಸ್ತು ಶಿಲ್ಪಿ ಹೊಂದಿದ್ದು ಕದಂಬರು, ಚಾಲುಕ್ಯರು, ರಾಷ್ಟ್ರಕೂಟರು ಇತ್ಯಾದಿ ರಾಜಮನೆತನಗಳ ಕೊಡುಗೆ ಸಾಹಿತ್ಯಕ ಮತ್ತು ಸಾಂಸ್ಕೃತಿಕ ಪರಂಪರೆಯ ಹೆಚ್ಚಿಸಿವೆ. ಎಂಟು ಜ್ಞಾನ ಪೀಠ ಪ್ರಶಸ್ತಿ ಪಡೆದ ಈ ನಾಡು ಪಂಪ,ರನ್ನ, ಪೊನ್ನ, ಜನ್ನ, ಕುಮಾರವ್ಯಾಸ ಹರಿಹರರಂತಹ ಮಹಾಕವಿಗಳನ್ನು ನೀಡಿದೆ. ಮನುಕುಲೋದ್ಧಾರಕ ಹೊಂಗಿರಣವಾದ ವಿಶ್ವಗುರು ಬಸವಣ್ಣನವರಂಥ ತತ್ವ ಚಿಂತಕರನ್ನು, ಕರ್ನಾಟಕ ಸಂಗೀತವನ್ನು ವಿಶ್ವಮಟ್ಟಕ್ಕೇರಿಸಿದ ಪುರಂದರದಾಸರನ್ನು ವೈಚಾರಿಕ ಪ್ರಿಯ ಹರಿಕಾರರಾದ ಕನಕದಾಸರನ್ನು, ಕನ್ನಡದ ಮೂಲಕ ಕಲಿತು ಶ್ರೇಷ್ಠ ವಿಜ್ಞಾನಿಯಾದ ಸಿ.ಎನ್.ಆರ್ ರಾವ ಅವರನ್ನು ಕೊಡುಗೆಯಾಗಿ ನೀಡಿದೆ ಎಂದರು. ತಹಸೀಲ್ದಾರ ಬಿ.ಎಸ್.ಕಡಕಬಾವಿ, ಓ,ಓ ಹೂಗಾರ ಮಾತನಾಡಿದರು. ವೇದಿಕೆಯ ಮೇಲೆ ಡಿವೈಎಸ್ಪಿ ಜಗದೀಶ ಎಚ್.ಎಸ್, ಮುಖ್ಯಾಧಿಕಾರಿ ಮಹಾಂತೇಶ ಹಂಗರಗಿ, ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ಟಿ.ಎಸ್‌ಅಲಗೂರ. ಕೃಷಿ ಸಹಾಯಕ ನಿರ್ದೇಶಕ ಮಹಾದೇವಪ್ಪ ಏವೂರ, ಎಚ್. ಎಸ್.ಪಾಟೀಲ, ಮಂಜುನಾಥ ಧುಳೆ, ಎಸ್.ಆರ್. ರುದ್ರವಾಡಿ, ಡಾ. ರಾಜಕುಮಾರ ಅಡಕಿ ಮತ್ತಿತರಿದ್ದರು. ಇದೇ ವೇಳೆ ರಾಜ್ಯ ಮಟ್ಟದ ಶಿಕ್ಷಕ ಪ್ರಶಸ್ತಿ ವಿಜೇತ ಶಿಕ್ಷಕಿ ಶಶಿಕಲಾ ಬಡಿಗೇರ ಇವರನ್ನು ಸನ್ಮಾನಿಸಲಾಯಿತು. ಮಕ್ಕಳಿಂದ ನೃತ್ಯ ಕಾರ್ಯಕ್ರಮ ನಡೆಯಿತು. ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಸಮಾರಂಭದಲ್ಲಿ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಜಾವೇದ ಮೋಮಿನ್, ಪ್ರಶಾಂತ ಕಾಳೆ, ಜಟ್ಟೆಪ್ಪ ರವಳಿ, ಧರ್ಮರಾಜ ವಾಲಿಕಾರ, ಅಯೂಬ ನಾಟಿಕಾರ, ರೈಸ ಅಷ್ಠೇಕರ, ಶಿವು ಮಲಕಗೊಂಡ ಮಂಜು ತೇಲಿ, ಶ್ರೀಶೈಲ ಪೂಜಾರಿ, ದಶರಥ ಕೋರಿ, ಪ್ರಾಚಾರ್ಯ ಎ.ಪಿ.ಬೆರಡ ಮತ್ತಿತರಿದ್ದರು.

# ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಗಮನ ಹರಿಸುವೆ :ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಬರುವ ಜನರಿಗೆ ಉತ್ತಮ ಚಿಕಿತ್ಸೆ ಹಾಗೂ ಮೂಲಭುತ ಸೌಕರ್ಯಗಳು ದೊರೆಯಬೇಕು ಎಂಬ ದಿಸೆಯಲ್ಲಿ ಉನ್ನತೀಕರಣ ಕಾಮಗಾರಿ ಹಾಕಿಕೊಳ್ಳಲಾಗಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರ ಘಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜನೀಯರಿಂಗ್ ಇಲಾಖೆ ಹಮ್ಮಿಕೊಂಡ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಮೂಲಭೂತ ಸೌಕರ್ಯಗಳ 1ಕೋಟಿ 20ಲಕ್ಷ ರೂ. ಅನುದಾನದ ಉನ್ನತೀಕರಣ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿ ಮಾತನಾಡಿದ ಅವರು, ಆಸ್ಪತ್ರೆಯ ಹಲವಾರು ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಆಸ್ಪತ್ರೆಯ ಅಧಿಕಾರಿಗಳ ಜೊತೆಗೆ ಸಭೆ ಮಾಡಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ 1ಕೋಟಿ 20ಲಕ್ಷ ರೂ. ವೆಚ್ಚದಲ್ಲಿ ನಾಲ್ಕೈದು ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಸಿಂದಗಿ ಮತಕ್ಷೇತ್ರದಲ್ಲಿ ಬರುವ ಎಲ್ಲ ಆಸ್ಪತ್ರೆಗಳನ್ನು ಸುಸಜ್ಜಿತವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ. ಸ್ಥಳೀಯ ಶಾಸಕರ ಅನುದಾನದಲ್ಲಿ ಆಲಮೇಲ, ಚಾಂದಕವಟೆ ಹಾಗೂ ಮಲಘಾಣ ಆಸ್ಪತ್ರೆಗಳಿಗೆ ಉನ್ನತೀಕರಣ ಮತ್ತು ಮೂಲಭೂತ ಸೌಕರ್ಯಕ್ಕಾಗಿ ವಿಶೇಷ ಅನುದಾನವನ್ನು ಮಂಜೂರು ಮಾಡುವ ಮೂಲಕ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಗಮನ ಹರಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು. ಈ ವೇಳೆ ದಂತವೈದ್ಯ ಡಾ.ರಮೇಶ ರಾಠೋಡ ಮಾತನಾಡಿ, ನನ್ನ 25 ವರ್ಷದ ಸೇವಾ ಅವಧಿಯಲ್ಲಿ ಆಸ್ಪತ್ರೆಗೆ ಇಷ್ಟು ದೊಡ್ಡ ಮಟ್ಟದ ಅನುದಾನ ಬಂದದ್ದು ಇದೆ ಮೊದಲು. ಇಷ್ಟು ದೊಡ್ಡ ಮೊತ್ತದ ಅನುದಾನವನ್ನು ತೆಗೆದುಕೊಂಡು ಬಂದು ಆಸ್ಪತ್ರೆಗಳನ್ನು ಉನ್ನತೀಕರಣ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸುತ್ತಿರುವ ಶಾಸಕರಿಗೆ ನಮ್ಮ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರ ಪರಿವಾಗಿ ಅಭಿನದಂನೆ ಸಲ್ಲಿಸುತ್ತೇನೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ತಾಲೂಕು ವೈದ್ಯಾಧಿಕಾರಿ ಡಾ.ಎ.ಎ. ಮಾಗಿ, ಡಾ.ಮಹಾಂತೇಶ ಹಿರೇಮಠ,

# ಕನ್ನಡ ನಿತ್ಯದ ಬಳಕೆಯಾದರೆ ಕನ್ನಡ ಭಾಷೆಗೆ ಅಳಿವಿಲ್ಲ :ಹಂಚಲಿ

■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ನಿತ್ಯ ಜೀವನದಲ್ಲಿ ಕನ್ನಡ ಭಾಷೆಯನ್ನು ಬಳಕೆ ಮಾಡದೇ ಹೋದರೆ ಅದು ನಶಿಸಿಹೋಗುವದರಲ್ಲಿ ಸಂದೇಹವಿಲ್ಲ. ಅದಕ್ಕಾಗಿ ಮಕ್ಕಳು ತಮ್ಮ ತಂದೆ-ತಾಯಿಯನ್ನು ಪಪ್ಪಾ-ಮಮ್ಮಿ ಎಂದು ಕರೆಯದೇ ಅಪ್ಪ-ಅಮ್ಮಾ ಎಂದು ಕರೆಯುವ ಮೂಲಕ ಮನೆಯಿಂದಲೇ ಕನ್ನಡ ಭಾಷೆಯ ಬಳಕೆ ಮಾಡಿದರೆ ಖಂಡಿತ ಕನ್ನಡ ಉಳಿಸುವಲ್ಲಿ ಪ್ರತಿಯೊಬ್ಬರೂ ತಮ್ಮ ಪಾತ್ರ ವಹಿಸಿದಂತೆ ಎಂದು ಸ್ಥಳೀಯ ಅಕ್ಕನಾಗಮ್ಮ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಅಶೋಕ ಹಂಚಲಿ ಹೇಳಿದರು.

ಪಟ್ಟಣದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ತಾಲೂಕಾಡಳಿತ ಶುಕ್ರವಾರ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ಇಂದು ಪ್ರತಿಯೊಬ್ಬ ಮಗು ಪಪ್ಪಾ-ಮಮ್ಮಿ, ಅಂಕಲ್-ಆಂಟಿ ಬಳಕೆ ಹೆಚ್ಚು ಮಾಡುವದನ್ನು ನೋಡುತ್ತಿದ್ದೇವೆ. ಮಕ್ಕಳು ಈ ಆಂಗ್ಲ ಶಬ್ದಗಳ ಬದಲಾಗಿ ಕನ್ನಡದ ಅಜ್ಜ-ಅಜ್ಜಿ, ಅಪ್ಪ-ಅಮ್ಮ, ಕಾಕಾ-ಚಿಕ್ಕಮ್ಮ, ಅತ್ತೆ, ಅಕ್ಕ-ಅಣ್ಣ, ಮಾಮಾ-ಅತ್ತಿಗೆ ಇಂತಹ ಶಬ್ದಗಳನ್ನು ನಿತ್ಯವೂ ಬಳಕೆ ಮಾಡುವ ಮೂಲಕ ಕನ್ನಡ ಭಾಷೆಯ ಉಳಿಕೆಗೆ ನಾವೆಲ್ಲರೂ ಮುಂದಾಗುವ ಅಗತ್ಯವಿದೆ. ಬದುಕಿನಲ್ಲಿ ಆದಷ್ಟು ಕನ್ನಡ ಭಾಷೆಯನ್ನು ಬಳಕೆ ಮಾಡಲು ಮುಂದಾಗಬೇಕೆಂದರು.

## ನಾಡದೇವಿ ಭಾವಚಿತ್ರ ಮೆರವಣಿಗೆ

ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಾಡದೇವಿಯ ಭಾವಚಿತ್ರದ ಮೆರವಣಿಗೆ ಜರುಗಿತು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣ, ಭುವನೇಶ್ವರಿ, ಸಂಗೊಳ್ಳಿ ರಾಯಣ್ಣ ಸ್ತಬ್ಧ ಚಿತ್ರಗಳು ಗಮನ ಸೆಳೆದವು. ಹಂಚಿನಾಳ ಕರವೇ ಕಾರ್ಯಕರ್ತರು ಕನ್ನಡ ಗೀತೆಗಳಿಗೆ ಮಾಡಿದ ಲೇಜಿಮ್ ನೃತ್ಯ ಜನರ ಗಮನ ಸೆಳೆಯಿತು. ಮೆರವಣಿಗೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು, ವಿವಿಧ ಶಾಲೆಯ ಸಿಬ್ಬಂದಿ, ಕೆಲವೇ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಕಾರ್ಯಕ್ರಮದಲ್ಲಿ ಹಲವು ಆಭಾಸಗಳು

ಸಮಾರಂಭದಲ್ಲಿ ಉಪನ್ಯಾಸಕರು ಮಾತನಾಡಿದ ನಂತರ ಉದ್ಘಾಟನೆ, ಪ್ರಾಸ್ತವಿಕ ನುಡಿ, ಅತಿಥಿಗಳ ಭಾಷಣ ಜರುಗಿತು. ನಾಡದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಲಿಲ್ಲ. ನಿರೂಪಕರು ಸಮಾರಂಭದ ಆಹ್ವಾನ ಪತ್ರಿಕೆಯಲ್ಲಿ ಪ್ರಕಟಿಸಿದ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ನಿಯಮದಂತೆ ಹಾಕಲಾಗಿದ್ದ ಎಲ್ಲ ಗಣ್ಯರ ಹೆಸರನ್ನು ಅವರು ಬಾರದೇ ಇದ್ದರೂ ಅವರು ವೇದಿಕೆಗೆ ಬರುವಂತೆ ಹೇಳಿದರು. ತಾಪಂ ಅಧಿಕಾರಿ ಕನ್ನಡದ ಶಾಲು ಹಾಕಿಕೊಳ್ಳದೇ ಇರುವುದನ್ನು ಗಮನಿಸಿದ ಕರವೇ ಕಾರ್ಯಕರ್ತರು ನಂತರ ಅವರಿಗೆ ವೇದಿಕೆಯಲ್ಲಿ ಹಾಕಿದ್ದು ಕಂಡುಬಂದಿತ್ತು.



ತಾಯಿ ನುಡಿ ಕನ್ನಡವನ್ನು ಕನ್ನಡಿಗರು ಕಾಪಾಡಬೇಕಿದೆ. ಹೃದಯದಿಂದ ಕನ್ನಡ ಭಾಷೆಯ ಬರುವಂತಾಗಬೇಕು. ಕೇವಲ ಕನ್ನಡದ ಬಗ್ಗೆ ಮಾತನಾಡಿದರೆ ಸಾಲದು. ಕನ್ನಡದ ಜಾಗೃತಿಗೆ ಸದಾ ಮುಂದಾಗಬೇಕೆಂದರು. ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಮಾತನಾಡಿ, ಜೀವನದಲ್ಲಿ ಕನ್ನಡ ಅಳವಡಿಸಿಕೊಂಡಾಗ ಮಾತ್ರ ಕನ್ನಡ ಉಳಿಯಲು ಸಾಧ್ಯ. ತಾವು ಶಿಕ್ಷಕ ವೃತ್ತಿಯಲ್ಲಿದ್ದಾಗ ಆಂಗ್ಲ ಭಾಷೆ ಪಾಠ ಮಾಡುವ ಸಂದರ್ಭದಲ್ಲಿ ಕನ್ನಡ ಭಾಷಾ ಶಿಕ್ಷಕ ಇಲ್ಲದೇ ಇರುವದರಿಂದಾಗಿ ತಾವು ಕನ್ನಡ ಪಾಠ ಮಾಡಿದೆ. ಮುಂದೆ ಕನ್ನಡ ಸಾಹಿತ್ಯವನ್ನು ತೆಗೆದುಕೊಂಡು ಕೆಎಎಸ್ ಪರೀಕ್ಷೆ ತೇರ್ಗಡೆಯಾಗಿದೆ. ಕನ್ನಡದ ಶಕ್ತಿ ಅಪಾರವಾಗಿದೆ ಎಂದರು. ಕರವೇ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ಮಾತನಾಡಿ, ರಾಜ್ಯಕ್ಕೆ ವಿವಿಧೆಡೆಗಳಿಂದ ಜನರು ವಲಸೆ ಬಂದಿದ್ದಾರೆ. ಅವರ ಭಾಷೆ ಬೆಳೆಯದಂತೆ ಕನ್ನಡಿಗರು ನೋಡಿಕೊಳ್ಳಬೇಕು. ಕರವೇ ಹೋರಾಟ ಫಲದಿಂದಾಗಿ ಈಗಾಗಲೇ ಕನ್ನಡ ನಾಮಫಲಕ ಶೇ. 60 ರಷ್ಟು ಇರಬೇಕೆಂದು ಸರ್ಕಾರ ಆದೇಶ ಹೊರಡಿಸಿದೆ. ಮುಂದಿನ ದಿನಗಳಲ್ಲಿ ಕರವೇ ಶೇ.80 ರಷ್ಟು ಉದ್ಯೋಗ ಕನ್ನಡಿಗರಿಗೆ ಸಿಗಬೇಕೆಂದು ಹೋರಾಟ ಮಾಡಲಿದೆ ಎಂದರು. ಸಾನಿಧ್ಯ ವಹಿಸಿದ್ದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ,ಮಾತೃಭಾಷೆಯುಎಲ್ಲೆಡೆಬಳಕೆಯಾಗಬೇಕು. ಎಪಿಎಂಸಿಗಳಲ್ಲಿ ದಲ್ಲಾಳಿಗಳು ಅನ್ಯ ಭಾಷೆಯಲ್ಲಿ ಕೂಗುತ್ತಾರೆ. ಇದರ ಬದಲಾಗಿ ಅವರು ಕನ್ನಡದಲ್ಲಿಯೇ ಅಂಕಿಗಳನ್ನು ಹೇಳುವಂತಾಗಬೇಕು. ಇದರಿಂದಾಗಿ ರೈತರಿಗೆ ಅನುಕೂಲವಾಗುತ್ತದೆ. ಸರ್ಕಾರ ಕನ್ನಡ ಶಾಲೆಗಳಿಗೆ ಆದ್ಯತೆ ನೀಡಬೇಕು. ಕನ್ನಡ ಭಾಷೆಗೆ ಹೆಚ್ಚು ಆದ್ಯತೆ ನೀಡುವಂತಾಗಬೇಕೆಂದರು. ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಕರವೇ ಮುಖಂಡ ಸುನೀಲ ರಾಠೋಡ ಮಾತನಾಡಿದರು. ವೇದಿಕೆಯಲ್ಲಿ ತಾಪಂ ಇಓ ಪ್ರಕಾಶ ದೇಸಾಯಿ, ಬಿಇಓ ವಸಂತ ರಾಠೋಡ, ಪುರಸಭೆ ಮುಖ್ಯಾಧಿಕಾರಿ ಅಪ್ರೋಜಅಹ್ಮದ ಪಟೇಲ, ತಾಲೂಕು ಕಸಾಪ ಅಧ್ಯಕ್ಷ ಶಿವಾನಂದ ಡೋಣೂರ, ಜಯಕರ್ನಾಟಕ ಅಧ್ಯಕ್ಷ ಶರಣು ಹೂಗಾರ, ಡಿಎಸ್ ಮುಖಂಡ ಅರವಿಂದ ಸಾಲವಾಡಗಿ ಇದ್ದರು. ಅಕ್ಕನಾಗಮ್ಮ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳು ನಾಡಗೀತೆ, ರೈತಗೀತೆ ಹಾಡಿದರು. ಬಿಇಓ ವಸಂತ ರಾಠೋಡ ಸ್ವಾಗತಿಸಿದರು. ಶಿಕ್ಷಕರಾದ ಕೊಟ್ರೇಶ ಹೆಗ್ಡಾಳ, ಬಿ.ವಿ.ಚಕ್ರಮನಿ ನಿರೂಪಿಸಿದರು. ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಎಸ್. ಎಸ್.ಅವಟಿ ವಂದಿಸಿದರು.

# ಕನ್ನಡವು ಶ್ರೇಷ್ಠ ಸಂಸ್ಕೃತಿ ಹೊಂದಿದ ಭಾಷೆ :ಪ್ರೊ.ತುಳಸಿಮಾಲ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಭಿವೃದ್ಧಿಯಲ್ಲಿ ಭಾಷೆಯ ಪಾತ್ರ ತುಂಬಾ ಮಹತ್ವದ್ದಾಗಿದೆ ಎಂದು ಮಹಿಳಾ ವಿವಿಯ ಕುಲಪತಿ ಪ್ರೊ. ಬಿ.ಕೆ ತುಳಸಿಮಾಲ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಶುಕ್ರವಾರ ಆಯೋಜಿಸಿದಕನ್ನಡರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನ್ನಡವು ಸಮೃದ್ಧ ಸಾಹಿತ್ಯ ಪರಂಪರೆ ಮತ್ತು ಶ್ರೇಷ್ಠ ಸಂಸ್ಕೃತಿಯನ್ನು ಹೊಂದಿದ ಭಾಷೆಯಾಗಿದ್ದು, ಇಂದಿನ ಸಮಾಜದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಅಭಿವೃದ್ಧಿಯ ಭಾಷೆಯಾಗಿ ಬೆಳೆಯಬೇಕಾಗಿದೆ. ಕನ್ನಡದಲ್ಲಿ ಈ ಕ್ಷೇತ್ರಗಳಿಗೆ ಸಂಬಂಧಿಸಿದ ಜ್ಞಾನವನ್ನು ಸೃಷ್ಟಿಸುವುದು ಮತ್ತು ನವೀನ ಪೀಳಿಗೆಗೆ ಸ್ಥಳೀಯ ಭಾಷೆಯಲ್ಲಿ ಬೋಧನೆ ನೀಡುವುದು ಅತ್ಯಾವಶ್ಯಕವಾಗಿದೆ. ಇದಕ್ಕಾಗಿ ಕನ್ನಡದಲ್ಲಿ ವಿಜ್ಞಾನ, ತಂತ್ರಜ್ಞಾನ ಮತ್ತು ತತ್ವಜ್ಞಾನ ಸಾಹಿತ್ಯವನ್ನು ರಚನೆ ಮಾಡುವುದರ ಜೊತೆಗೆ ಪಠ್ಯಪುಸ್ತಕಗಳಲ್ಲಿ ಕನ್ನಡ ಬಳಕೆಯನ್ನು ಪ್ರೋತ್ಸಾಹಿಸುವುದು ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದು ಕನ್ನಡದ ಬೆಳವಣಿಗೆಗೆ ಅವಶ್ಯಕವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಾಹಿತಿ ಪ. ಗು. ಸಿದ್ದಾಪುರ ಅವರು ಮಾತನಾಡಿ ಕನ್ನಡದ ಕಂಪು ಗಡಿಯಾಚೆ, ಕಡಲಾಚೆ ಪಸರಿಸಿಬೇಕು. ಮಹಾರಾಷ್ಟ್ರದಲ್ಲಿ ಕನ್ನಡ ಹೆಸರಿನ ಊರಿನ ಬಗ್ಗೆ ಪ್ರಸ್ತಾಪಿಸಿ, ಕನ್ನಡ ಅಂಕಿಗಳ ಬಳಕೆ ಹೆಚ್ಚಾಗಬೇಕೆಂದು ಆಶಿಸಿದರು. ಕನ್ನಡಕ್ಕೆ ಕಿಟೆಲ್, ಮಧುರಚೆನ್ನರ ಸೇವೆಯನ್ನು ಸ್ಮರಿಸುತ್ತ ಕನ್ನಡವನ್ನು ಪ್ರೀತಿಸಿ, ಅನ್ಯ ಭಾಷೆಗಳನ್ನು ಗೌರವಿಸಿ ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ರಸ ಪ್ರಶ್ನೆಗಳನ್ನು ಕೇಳಿ ಬಹುಮಾನ ವಿತರಿಸಿದರು. ವಂದೇಮಾತರ ಗೀತೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಸಂಗೀತ ವಿಭಾಗದ ವಿದ್ಯಾರ್ಥಿನಿಯರು ಮತ್ತು ಪ್ರೊ. ಬಳಿಗಾರ ಕನ್ನಡ ಗೀತೆಗಳನ್ನು ಹಾಡಿದರು. ಪ್ರೊ. ಹನುಮಂತಯ್ಯ ಪೂಜಾರ ಕಾರ್ಯಕ್ರಮ ನಿರೂಪಿಸಿದರು.

**ಸಿಂದಗಿ ನಗರದ ವಿವಿಧೆಡೆ ವಿಜೃಂಬಣೆಯಿಂದ ಕನ್ನಡ ರಾಜ್ಯೋತ್ಸವ ಆಚರಣೆ**

# ಕನ್ನಡ ನಾಡು-ನುಡಿ, ಭಾಷೆ-ಸಾಹಿತ್ಯ ವಿಶ್ವಕ್ಕೆ ಮಾದರಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕನ್ನಡ ನಾಡು ಸಂಪದ್ಭರಿತವಾದ ನಾಡು. ಇಲ್ಲಿನ ನೆಲ, ಜಲ, ನಾಡು-ನುಡಿ, ಭಾಷೆ, ಸಾಹಿತ್ಯ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಆದ್ದರಿಂದ ನಾಡಿನ ಸಂಪತ್ತು ಮತ್ತು ಸಂಸ್ಕೃತಿಯನ್ನು ಉಳಿಸಿಕೊಂಡು ಹೋಗುವದು ನಮ್ಮೆಲ್ಲರ ಜವಾಬ್ದಾರಿ ಎಂದು ಪ್ರಾಚಾರ್ಯ ಆರ್.ಬಿ.ಗೋಡಕರ ಹೇಳಿದರು.

ಇದೇ ಸಂದರ್ಭದಲ್ಲಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಜಿ.ಎಸ್. ಕಡಣಿ ಹಿರಿಯ ಉಪನ್ಯಾಸಕ ಪಿ.ಎಂ. ಮಡಿವಾಳರ, ಉಪನ್ಯಾಸಕ ಮಾಂತೇಶ ದಂಡವತ, ಸಿ.ಜೆ.ರಾಠೋಡ, ಅಶ್ವಿನಿ ಚನಾಳ, ವಸುಧಾ ಭಟ್, ಅಮೀರ ಮೋಪಗಾರ, ಅಶೋಕ ತಳವಾರ ಹಾಗೂ ಮಲ್ಲು ಹೊಸಮನಿ ಉಪಸ್ಥಿತರಿದ್ದರು.

**ಪ್ರೇರಣಾ ಶಾಲೆ ಸಿಂದಗಿ**

ಪಟ್ಟಣದ ಹೊರವಲಯದ ಪ್ರೇರಣಾ ಶಾಲೆಯಲ್ಲಿ ಕನ್ನಡ ರಾಜ್ಯೊತ್ಸವವನ್ನು ಆಚರಣೆ ಮಾಡಲಾಯಿತು.

ಈ ವೇಳೆ ಶ್ರೀ ಸಮರ್ಥ ವಿದ್ಯಾ ವಿಕಾಸ ಸಂಸ್ಥೆಯ ಅಧ್ಯಕ್ಷ ಆರ್.ಡಿ ಕುಲಕರ್ಣಿ, ನಿರ್ದೇಶಕ ಪಿ.ಡಿ. ಕುಲಕರ್ಣಿ, ಮುಖ್ಯ ಗುರಮಾತೆ ಎಸ್.ಐ ಅಸ್ಕಿ ಸೇರಿದಂತೆ ಸಂಸ್ಥೆಯ ನಿರ್ದೇಶಕ ಮಂಡಳಿ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಇದ್ದರು.

**ಶ್ರೀ ಪದ್ಮರಾಜ ಮಹಿಳಾ ಕಾಲೇಜು**

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಲಾಯಿತು.

ಇದೇ ವೇಳೆ ಪದವಿ ಪ್ರಾಚಾರ್ಯ ಎಮ್.ಎಸ್.ಹೈಯ್ಯಾಳಕರ, ಎಸ್.ಎಂ.ಪೂಜಾರಿ, ಉಪನ್ಯಾಸಕರಾದ ಜಿ.ಎ.ನಂದಿಮಠ, ಜಿ.ಎಸ್. ಕುಲಕರ್ಣಿ, ಎಸ್.ಸಿ.ದುದ್ದಗಿ, ಹೇಮಾ ಕಾಸರ, ಸತೀಶ ಕಕ್ಕಸಗೇರಿ, ಶಂಕರ ಕುಂಬಾರ, ವಿಜಯಲಕ್ಷ್ಮಿ ಭಜಂತ್ರಿ ಸೇರಿದಂತೆ ಅನೇಕರಿದ್ದರು.

**ತಾಲೂಕು ಸಾರ್ವಜನಿಕ ಆಸ್ಪತ್ರೆ**

ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ವಿಜೃಂಬಣೆಯಿಂದ ಆಚರಣೆ ಮಾಡಲಾಯಿತು.

ಈ ವೇಳೆ ಡಾ.ಮಹಾಂತೇಶ ಹಿರೇಮಠ, ರಾಜಶೇಖರ ನರಗೋದಿ, ಎಂ.ಪಿ ಸಾಗರ, ಡಾ. ಮೋಹನ ಬಡಿಗೇರ, ರಾಜಶ್ರೀ ದೊಡ್ಡಮನಿ, ಗೀತಾ ಹಡಪದ, ಹಾಗೂ ಡಾ.ರಮೇಶ ರಾಠೋಡ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿಗಳು ಇದ್ದರು.

**ಎಚ್.ಜಿ.ಪಪೂ ಕಾಲೇಜು**

ನಗರದ ತಾಲೂಕು ಶಿಕ್ಷಣ ಪ್ರಸಾರಕ ಮಂಡಳಿಯ ಎಚ್.ಜಿ.ಪಪೂ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಈ ವೇಳೆ ಪ್ರಾಚಾರ್ಯ ಎ.ಆರ್. ಹೆಗ್ಗನದೊಡ್ಡಿ, ಉಪನ್ಯಾಸಕರಾದ ಎಸ್.ಎ.ಪಾಟೀಲ್, ಆರ್.ಬಿ ಹೊಸಮನಿ, ಆರ್.ಸಿ.ಕಕ್ಕಳಮೇಲಿ, ಬಿ.ಎಸ್.ಬಿರಾದಾರ, ಮುಕ್ತಾಯಕ್ಕ ಕತ್ತಿ, ಸತೀಶ ಬಸರಕೋಡ, ಎ.ಬಿ ಪಾಟೀಲ್, ಸಿದ್ದಲಿಂಗ ಕಿಣಗಿ ಸೇರಿದಂತೆ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

ಆರ್.ಡಿ ಪಾಟೀಲ ಮಹಾವಿದ್ಯಾಲಯ

ಪಟ್ಟಣದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಆರ್.ಡಿ.ಪಾಟೀಲ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ 69ನೆಯ ಕನ್ನಡ ರಾಜ್ಯೋತ್ಸವದ ಆಚರಣೆ ಮಾಡಲಾಯಿತು.

ಈ ವೇಳೆ ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ, ಉಪನ್ಯಾಸಕರಾದ ಪಿ.ವ್ಹಿ. ಮಹಲಿನಮಠ, ಬಿ.ಬಿ.ಜಮಾದಾರ, ಎನ್.ಬಿ.ಪೂಜಾರಿ, ವ್ಹಿ.ಪಿ.ನಂದಿಕೋಲ, ಶಿವಶರಣ ಬೂದಿಹಾಳ, ಶಿವರಾಜ ಕುಂದಗೋಳ, ಸಂಗಮೇಶ ಚಾವರ, ಎನ್. ಎಂ.ಶೆಳ್ಳಗಿ, ಡಾ.ಶರಣು ಜೋಗೂರ, ಶರಣು ಹೂಗಾರ, ಗವಿಸಿದ್ದಪ್ಪ ಆನೆಗುಂದಿ, ಎಸ್.ಜಿ.ಮಾರ್ಸನಳ್ಳಿ, ಪ್ರಸನ್ನಕುಮಾರ ಜೋಗೂರ ಸೇರಿದಂತೆ ಇನ್ನಿತರರು ಇದ್ದರು.

ಮಹಿಳಾ ಸಾಂತ್ವಾನ ಸಹಾಯವಾಣಿ ಕೇಂದ್ರ ಪಟ್ಟಣದ ಬಂದಾಳ ರಸ್ತೆಯಲ್ಲಿರುವ ಮಹಿಳಾ ಸಾಂತ್ವಾನ ಸಹಾಯವಾಣಿ ಕೇಂದ್ರದಲ್ಲಿ ಕನ್ನಡ ರಾಜ್ಯೊತ್ಸವವನ್ನು ಆಚರಣೆ ಮಾಡಲಾಯಿತು.

ಈ ವೇಳೆ ರಶ್ಮಿ ನೂಲಾನವರ, ವಿದ್ಯಾ ದೇಸಾಯಿ ಇದ್ದರು.

**ವಿದ್ಯಾಚೇತನ ಶಾಲೆ:**

ಪಟ್ಟಣದ ಹೂಗಾರ ಲೇಔಟ್‌ನಲ್ಲಿರುವ ವಿದ್ಯಾಚೇತನ ಶಾಲೆಯಲ್ಲಿ ಕನ್ನಡ ರಾಜ್ಯೊತ್ಸವವನ್ನು ಆಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ತೆಯ ಅಧ್ಯಕ್ಷೆ ಕುಸುಮಾ ಯಾಳಗಿ, ಸಕ್ಕುಬಾಯಿ ಡಾಂಗಿ, ವಿಕಾಸ ಚೌರ, ಅಕ್ಷಯ ದೀಕ್ಷಾ, ಸುಮಾ ಬಿರಾದಾರ, ರೂಪಾ, ಪ್ರಗತಿ ಸೇರಿದಂತೆ ಶಾಲೆಯ ಬೋಧಕ-ಬೋಧಕೇತರ ಸಿಬ್ಬಂದಿಗಳು ಇದ್ದರು.

**ಕಾವ್ಯಾ ಶಿಕ್ಷಣ ಸಂಸ್ಥೆ**

ಪಟ್ಟಣದ ಭುವನೇಶ್ವರಿ ವಿದ್ಯಾವರ್ಧಕ ಸಂಘದ ಶ್ರೀ ಸಂಗಮೇಶ್ವರ ಪಾರ್ಮಸಿ ಹಾಗೂ ಕಾವ್ಯಾ ಶಾಲೆಯಲ್ಲಿ ಕನ್ನಡ ರಾಜೋತ್ಸವ ಆಚರಣೆ ಮಾಡಲಾಯಿತು.

ಕಾನಿಪ ಸಂಘದ ಅಧ್ಯಕ್ಷ ಆನಂದ ಶಾಬಾದಿ, ಮಲ್ಲನಗೌಡ ಪಾಟೀಲ ಇಬ್ರಾಹಿಂಪೂರ, ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ ನಾಗರಬೆಟ್ಟ, ಸಂದೀಪ, ಎಂ.ಎಂ. ಹಂಗರಗಿ, ಸಂದೀಪ ಸೇರಿದಂತೆ ಶಾಲೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

# ದೇವರಹಿಪ್ಪರಗಿ: ವಿವಿಧೆಡೆ ಸಂಭ್ರಮದ ಕನ್ನಡ ರಾಜ್ಯೋತ್ಸವ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ಶಾಲೆ, ಕಾಲೇಜು ಸೇರಿದಂತೆ ತಾಲ್ಲೂಕಿನ ವಿವಿಧೆಡೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ವಿಜೃಂಭಣೆಯಿಂದ ಆಚರಿಸಲಾಯಿತು. ತಾಲ್ಲೂಕು ಆಡಳಿತ ಹಾಗೂ ಕನ್ನಡ ಸಾಹಿತ್ಯ ಪರಿಷತ್‌ಕನ್ನಡ ರಾಜ್ಯೋತ್ಸವದ ನಿಮಿತ್ತ ನಾಡದೇವಿಯ ಭಾವಚಿತ್ರದ ಮೆರವಣಿಗೆ ಅದ್ದೂರಿಯಾಗಿ ಜರುಗಿಸಲಾಯಿತು. ಮೊಹರೆ ಹಣಮಂತ್ರಾಯ ವೃತ್ತದಿಂದ ಹೊರಟ ಮೆರವಣಿಗೆ ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತದ ಮೂಲಕ ಪಂಚಾಚಾರ್ಯ ಕಲ್ಯಾಣ ಮಂಟಪ ತಲುಪಿತು. ನಾಡ ದೇವಿಯ ಭಾವಚಿತ್ರದೊಂದಿಗೆ ಮಕ್ಕಳು ಧರಿಸಿದ್ದ ವೇಷಭೂಷಣಗಳು ಜನತೆಯ ಗಮನ ಸೆಳೆದವು. ನಂತರ ಜರುಗಿದ ಕಾರ್ಯಕ್ರಮಕ್ಕೆ ತಹಶೀಲ್ದಾರ ಪ್ರಕಾಶ ಸಿಂದಗಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಜಯಶ್ರೀ ದೇವಣಗಾಂವ, ಉಪಾಧ್ಯಕ್ಷ ರಮೇಶ ಮಸಬಿನಾಳ, ತಾಲ್ಲೂಕು ಕಸಾಪ ಅಧ್ಯಕ್ಷ ಜಿ.ಕೆ.ಬಿರಾದಾರ, ವಿಜಯಲಕ್ಷ್ಮಿ ನವಲಿ, ರಹಿಮಾನ್ ಕಣಕಾಲ, ಶಿವರಾಜ ತಳವಾರ, ಅರುಣ ಕೋರವಾರ ಸೇರಿದಂತೆ ಪಟ್ಟಣ ಪಂಚಾಯಿತಿ ಸದಸ್ಯರು, ಸಂಘಟನೆಗಳ ಪದಾಧಿಕಾರಿಗಳು ಇದ್ದರು.

**ತಾಲ್ಲೂಕು ನಿವೃತ್ತ ನೌಕರರ ಸಂಘ**

ಕನ್ನಡ ರಾಜ್ಯೋತ್ಸವ ಅಂಗವಾಗಿ ನಾಡದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷ ಸಿ.ಕೆ. ಕುದರಿ, ಎಸ್.ವ್ಹಿ.ಆಲಾಳಮಠ, ಪಿ.ಜಿ. ಹಿರೇಮಠ, ಎಂ. ಆರ್.ಶಿರಸಂಗಿಮಠ, ಬಸವರಾಜ ಬಬಲೇಶ್ವರ, ಬಿ.ಎಸ್.ಉತ್ನಾಳ, ಎಸ್.ಎನ್.ಬಸವರೆಡ್ಡಿ, ಕೆ. ಕೆ.ಭಾವಿಮನಿ ಹಾಗೂ ಇತರರು ಇದ್ದರು.

**ಸಿದ್ಧೇಶ್ವರ ಸ್ವಾಮೀಜಿ ಕಾಲೇಜು**

ಕಾಲೇಜು ಆವರಣದಲ್ಲಿ ಯೋಗ ಹಾಗೂ ಆಧ್ಯಾತ್ಮಿಕ ಗುರು ನಿರಂಜನ ಸ್ವಾಮೀಜಿ ನಾಡದೇವಿಗೆ ಪೂಜೆ ಸಲ್ಲಿಸಿ ಧ್ವಜಾರೋಹಣ ಮಾಡಿ ರಾಜ್ಯೋತ್ಸವಕ್ಕೆ ಚಾಲನೆ ನೀಡಿದರು.

ಕಾಲೇಜು ಸಂಸ್ಥಾಪಕ ವಿ. ಕೆ.ಪಾಟೀಲ, ಎಂ.ಆರ್.ಮಠ, ಕಾಶೀನಾಥ ಯಂಭತ್ನಾಳ, ಮಹಾಂತೇಶ ಬೀಳಗಿಮಠ, ಆನಂದ ಎ.ಕೆ. ಎಮ್. ಎಸ್.ಪಾಟೀಲ, ವಿನೋದ ಉತ್ನಾಳ ಸಹಿತ ಸಿಬ್ಬಂದಿ ಹಾಗೂ ಮಕ್ಕಳು ಇದ್ದರು



ಚಿಕ್ಕರೂಗಿ ಕರ್ನಾಟಕ ರಕ್ಷಣಾ ವೇದಿಕೆ ವೃತ್ತ

ಗ್ರಾಮದ ಕ.ರ.ವೇ ವೃತ್ತದಲ್ಲಿ ನಾಡಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವ ಆಚರಣೆಗೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕರವೇ ಜಿಲ್ಲಾಧ್ಯಕ್ಷ ಶ್ರೀಶೈಲ ಮುಳಜಿ, ಗ್ರಾಮ ಘಟಕದ ಅಧ್ಯಕ್ಷ ಜಾವೀದ್ ಕೊಲ್ಹಾರ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಅಶೋಕ ರತ್ನಾಕರ, ರವಿ ಬಿರಾದಾರ, ಅಶೋಕ ಚಂಡಕಿ, ವ್ಹಿ.ಕೆ.ಕುಲಕರ್ಣಿ ಸಹಿತ ಗ್ರಾಮಸ್ಥರು ಭಾಗವಹಿಸಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR